ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 121 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 22–11–2023 ಬುಧವಾರ ಪುಟ: 4 ಬೆಲೆ : ರೂ.2–00
Volume - 01 Issue - 121 Title- Code: KARKAN 28269 Chitradurga Date: 22-11-2023 Wednesday Page: 4 Price: Rs. 2-00



ಒಳಪುಟದ ಸುದ್ದಿಗಳು
ತಜ್ಞ ವೈದ್ಯಕೀಯ ಸೇವೆಯ ಸದುಪಯೋಗ ಪಡೆಯಿರಿ 2
ಅವೈಜ್ಞಾನಿಕ ಡಿವೈಡರ್ ತೆರವು ಮಾಡಿ ಜೀವ ಉಳಿಸಿ: ಕಾಂತರಾಜ್ 3
ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಶ್ರಮಿಸಿ, ಮಕ್ಕಳನ್ನು ಮುಖ್ಯವಾಹಿನಿಗೆ ತನ್ನಿ 4



ಸುದ್ದಿ, ಜಾಹಿರಾತಿಗೆ 9686622252




# ಕಂದಾಯ ಇಲಾಖೆ ಅರ್ಜಿ ವಿಲೇವಾರಿಯಲ್ಲಿ ಕರ್ನಾಟಕಕ್ಕೆ ಹಾಸನ ನಂಬರ್ 1



ಆಡಳಿತ ಯಂತ್ರಕ್ಕೆ ಹೊಸ ಆಯಾಮ ನೀಡಿದ

## ಜಿಲ್ಲಾಧಿಕಾರಿ ಸಿ.ಸತ್ಯಭಾಮ

ಹಾಸನ ಸರ್ಕಾರಿ ಕೆಲಸ ದೇವರ ಕೆಲಸ, ಸಾವಿರಾರು ಬಡವರು ನಿತ್ಯ ಸರ್ಕಾರಿ ಇಲಾಖೆಗಳಿಗೆ ಅಲೆದಾಡುತ್ತಾರೆ. ಬಡವರ ಅಲೆದಾಟ ತಪ್ಪಿಸಲು ಅಧಿಕಾರಿಗಳು ಮನಸ್ಸು ಮಾಡಿದರೆ ಯಾವ ಕೆಲಸವು ಸಹ ನಿಲ್ಲುವುದಿಲ್ಲ. ಇಲಾಖೆಗಳಿಗೆ ಜನರು ಅಲೆದಾಡುವುದು ಬಹುತೇಕ ವಿರಳವಾಗುತ್ತದೆ. ಸಮಸ್ಯೆಗಳನ್ನು ಹುಡುಕಿದರೆ ಪರಿಹಾರ ಸಿಗುತ್ತದೆ. ಅಂತಹ ಸಮಸ್ಯೆಗಳಿಗೆ ಇಡೀ ಇಲಾಖೆ ಎಲ್ಲಾ ಸಿಬ್ಬಂದಿ ವರ್ಗದವರ ಕಾರ್ಯ ಮುಖ್ಯವಾಗುತ್ತದೆ. ಎಲ್ಲಾ ಸಿಬ್ಬಂದಿಗಳನ್ನು ಜೊತೆಯಾಗಿ ಕೊಂಡೊಯ್ಯುವ ಕೆಲಸ ಸಾಮಾನ್ಯವಲ್ಲ , ಸಾಗರದಂತೆ ಇರುವ ಕಂದಾಯ ಇಲಾಖೆಯಲ್ಲಿನ ಜನರ ಸಮಸ್ಯೆಗಳನ್ನು ಮೆಟ್ಟಿನಿಂತು ಭೂಮಿ ಯೋಜನೆಯ ಅರ್ಜಿ ವಿಲೇವಾರಿ ಮಾಡುವ ಮೂಲಕ ರಾಜ್ಯಕ್ಕೆ ಹಾಸನ ಜಿಲ್ಲೆ ನಂಬರ್ ಓನ್ ಸ್ಥಾನ ಪಡೆಯುವಲ್ಲಿ ಜಿಲ್ಲಾಧಿಕಾರಿ ಸಿ.ಸತ್ಯಾಭಾಮ ಮತ್ತು ಅವರ ತಂಡ ಕಾರ್ಯವೈಖರಿ ಕಾರಣ ಎಂದರೆ ತಪ್ಪಾಗಲಾರದು.

ಎಲ್ಲಾ ಇಲಾಖೆಗಳಲ್ಲಿ ಸಮಸ್ಯೆಗಳು ಇರುತ್ತದೆ ಆದರೆ ಸಮಸ್ಯೆ ಬಗೆಹರಿಸುವ ಮನಸ್ಸು ಇಲಾಖೆ ಮುಖ್ಯಸ್ಥರಿಗೆ ಇರಬೇಕು. ಸಾರ್ವಜನಿಕರ ಸಮಸ್ಯೆಯನ್ನು ತನ್ನ ಸಮಸ್ಯೆ ಎಂಬಂತೆ ಕೆಲಸ ಮಾಡಿದರೆ ಎಲ್ಲಾ ಕೆಲಸಗಳು ಸರಾಗವಾಗಿ ಆಗುತ್ತವೆ ಎಂಬ ಇಚ್ಛೆಯನ್ನು ಹೊಂದಿರುವ ಸಿ. ಸತ್ಯಾಭಾಮ ಅವರು ಜುಲೈ 12 ಕ್ಕೆ 2023 ರಂದು ಜಿಲ್ಲಾಧಿಕಾರಿಯಾಗಿ ನೇಮಕಗೊಂಡರು. ಆ ಸಂದರ್ಭದಲ್ಲಿ ಕಂದಾಯ ಇಲಾಖೆ ಭೂಮಿ ಯೋಜನೆತಡಿ ಸಾವಿರಾರ ಅರ್ಜಿಗಳು ವಿಲೇವಾರಿ ಆಗದೇ ಹಾಸನ ಜಿಲ್ಲೆ 29 ನೇ ಸ್ಥಾನದಲ್ಲಿತ್ತು.

ಕಂದಾಯ ಇಲಾಖೆಯ ಭೂಮಿ ಯೋಜನೆಯಡಿ ಖಾತೆಗಳು, ರಿಜಿಸ್ಟರ್, ದಾನಪತ್ರ, ಕನವರ್ಷನ್ , ಇ– ಖಾತೆ ಸೇರಿ ಹತ್ತು ಹಲವು ಸಮಸ್ಯೆಗಳ ಒತ್ತು ಬರುವ ಅರ್ಜಿಗಳನ್ನು ಸ್ವೀಕರಿಸಿ ಅರ್ಜಿಗಳ ವಿಲೇವಾರಿಯ ಪ್ರಗತಿಯಲ್ಲಿ ರಾಜ್ಯದ ಇತರೆ ಜಿಲ್ಲೆಗಳನ್ನು ಹಿಂದಿಕ್ಕಿದೆ.

ಭೂಮಿ ಯೋಜನೆಯಡಿ ಸಾರ್ವಜನಿಕರಿಂದ ಸ್ವೀಕರಿಸಿದ ಅರ್ಜಿಗಳನ್ನು ವಿಲೇವಾರಿ ಮಾಡುವುದರಲ್ಲಿ 29 ನೇ ಸ್ಥಾನದಲ್ಲಿದ್ದ ಹಾಸನ ಜಿಲ್ಲೆಯನ್ನು ಪ್ರಥಮ ಸ್ಥಾನಕ್ಕೇರಿಸಲೇಬೇಕು ಎಂದು ಜಿಲ್ಲಾಧಿಕಾರಿ ಸಿ.ಸತ್ಯಾಭಾಮ ಕನಸಾಗಿತ್ತು. ಕನಸು ನನಸು ಮಾಡಲು ಸಾಕಷ್ಟು ಶ್ರಮವು ಬೇಕು. ಬರೀ ಕನಸು ಕಂಡರೆ ಸಾಲದು ಅದಕ್ಕೆ ವಿಶೇಷವಾದ ಕಾರ್ಯತಂತ್ರ ರಚಿಸಿ ಸಭೆಗಳನ್ನು ಮಾಡಿ ಮೊದಲು ಸಮಸ್ಯೆ ಅರಿತುಕೊಂಡರು ನಂತರ ಮಾಡಿದ್ದು ಯಾರಿಗೆ ಯಾವ ಜವಬ್ದಾರಿ ವಹಿಸಿದರೇ ಯಶಸ್ವಿಯಾಗುತ್ತದೆ ಎಂದು ಮನವರಿಕೆ ಮಾಡಿಕೊಂಡು ಸಿಬ್ಬಂದಿಗಳ ವಿಶ್ವಾಸ ಗಳಿಸುವ ಮೂಲಕ ಎಲ್ಲಾ ತಂತ್ರಗಳನ್ನು ಅನುಸರಿಸಿದ ಫಲವಾಗಿ ಹಾಸನ ಜಿಲ್ಲೆಗೆ ಪ್ರಥಮ ಸ್ಥಾನ ದೊರಕಿದೆ.

- ಮೊದಲ ಬಾರಿ ರಾಜ್ಯಕ್ಕೆ ಹಾಸನ ಜಿಲ್ಲೆ ಕಂದಾಯ ಇಲಾಖೆ ಅರ್ಜಿ ವಿಲೇವಾರಿಯಲ್ಲಿ ಪ್ರಥಮ ಸ್ಥಾನ
- ಜುಲೈ 2023 ರಂದು 29 ನೇ ಸ್ಥಾನದಲ್ಲಿದ್ದ ಹಾಸನ
- ನೂತನ ಡಿಸಿ ಸತ್ಯಭಾಮ ಅವರ ಕಾರ್ಯತಂತ್ರದ ಫಲ ಪ್ರಥಮ ಸ್ಥಾನ
- ಡಿಸಿ ಕೋರ್ಟ್ ನಲ್ಲಿ ಕಳೆದ ತಿಂಗಳು 383 ಪ್ರಕರಣಗಳನ್ನು ಇತ್ಯರ್ಥ
- ನಿಗದಿತ ಸಮಯದಲ್ಲಿ ಅರ್ಜಿ ವಿಲೇವಾರಿ
- ಜನ ಅಲೆದಾಟ ತಪ್ಪಿಸಲು ಸಮಸ್ಯೆಗಳ ಪರಿಹಾರಕ್ಕೆ ಒತ್ತು.
- ನೇರವಾಗಿ ಜನರ ಸಮಸ್ಯೆ ಆಲಿಸಿದ ಡಿಸಿ
- ನಿತ್ಯ ಪ್ರತಿ ತಾಲೂಕಿನಿಂದ ಅರ್ಜಿ ವಿಲೇವಾರಿ ಮಾಹಿತಿ ಜೊತೆಗೆ ಸೂಕ್ತ ಮಾರ್ಗದರ್ಶನ



### ಆಡಳಿತ ಯಂತ್ರಕ್ಕೆ ಹೊಸ ಕಾರ್ಯತಂತ್ರದ ಮೂಲಕ ಮತ್ತಷ್ಟು ವೇಗ: ಡಿಸಿ

ನಮಗೆ ದೇವರು ಬಡವರ ಸೇವೆ ಮಾಡಲು ಅತ್ಯಮೂಲ್ಯ ಅವಕಾಶ ನೀಡಿದ್ದು ಅದನ್ನು ಸದುಪಯೋಗ ಮಾಡಿಕೊಂಡು ಜನರ ಕೆಲಸ ಕಾರ್ಯಗಳು ಮಾಡಬೇಕು ಎಂಬ ಬಯಕೆ ನನ್ನದು. ಪ್ರತಿ ಸರ್ಕಾರಿ ಇಲಾಖೆಯಲ್ಲಿ ಸಮಸ್ಯೆಗಳು ಸಾಮಾನ್ಯ ಆದರೆ ಸಮಸ್ಯೆಗಳನ್ನು ಆಲಿಸಿ ಪರಿಹಾರ ಒದಗಿಸುವ ಕೆಲಸ ನಾವು ಮಾಡಬೇಕು.ಆಗ ಮಾತ್ರ ನಮ್ಮ ಕೆಲಸಕ್ಕೆ ನ್ಯಾಯ ಒದಗಿಸಿದಂತೆ ಆಗುತ್ತದೆ.ಕಂದಾಯ ಇಲಾಖೆಯಲ್ಲಿ ಪ್ರತಿ ನಿತ್ಯವು ಸಮಸ್ಯೆಗಳನ್ನು ಒತ್ತು ಜನರು ಬರುತ್ತಾರೆ. ಅದನ್ನು ಸಮರ್ಥವಾಗಿ ನಿರ್ವಹಿಸಿ ಪರಿಹಾರ ಒದಗಿಸಬೇಕು.ಜನರು ತಮ್ಮ ದುಡಿಮೆ ಬಿಟ್ಟು ಕಚೇರಿಗಳಿಗೆ ಬರುತ್ತಾರೆ. ಆ ಸಮಸ್ಯೆಗಳಿಗೆ ಪರಿಹಾರ ಕೊಟ್ಟರೆ ಮತ್ತೊಮ್ಮೆ ಏಕೆ ಕಚೇರಿಗಳಿಗೆ ಬರುತ್ತಾರೆ ಅಲ್ವಾ ನಮ್ಮ ಹಾಸನ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಸಾವಿರಾರು ಅರ್ಜಿಗಳಿಗೆ ಪರಿಹಾರ ಒದಗಿಸಿದ್ದೇನೆ.ನಮ್ಮ ಎಲ್ಲಾ ಸಹೋದ್ಯೋಗಿಗಳ ಕ್ರಿಯಾಶೀಲ ಕಾರ್ಯ ವೈಖರಿಯಿಂದ ನಮ್ಮ ಜಿಲ್ಲೆ ಕಂದಾಯ ಇಲಾಖೆ ಅರ್ಜಿ ವಿಲೇವಾರಿಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುವುದು ನಮಗೆ ಸಂತೋಷ ತಂದಿದೆ. ಮುಂದಿನ ದಿನದಲ್ಲಿ ಪ್ರಥಮ ಸ್ಥಾನ ಉಳಿಸಿಕೊಂಡು ಅರ್ಜಿ ವಿಲೇವಾರಿ ಮಾಡಿಕೊಂಡು ಇನ್ನೂ ಹೆಚ್ಚಿನ ಕೆಲಸ ಮಾಡಬೇಕು ಎಂದು ಹೊಸ ಯೋಜನೆ ರೂಪಿಸಲಾಗಿದೆ ಎನ್ನುತ್ತಾರೆ ಜಿಲ್ಲಾಧಿಕಾರಿ ಸಿ.ಸತ್ಯಭಾಮ.

### ವಿಲೇವಾರಿಗೆ ತೊಡಕಿದ್ದರೆ ಮಾಹಿತಿ ಪಡೆಯುತ್ತಿದ್ದ ಡಿಸಿ

ಪ್ರತಿ ಅರ್ಜಿಯನ್ನು ಪರಿಶೀಲನೆ ಮಾಡಬೇಕು. ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಯಾವ ವಿಷಯಕ್ಕೆ ಸಂಬಂಧಿಸಿದ ಅರ್ಜಿಗಳು, ವಿಲೇವಾರಿ ಮಾಡಲು ಇರುವ ತಾಂತ್ರಿಕ ತೊಂದರೆಗಳು ಏನು, ಮತ್ತಿತರ ಅಂಶಗಳ ಬಗ್ಗೆ ಮಾಹಿತಿ ಪಡೆಯುತ್ತಿದ್ದ ಜಿಲ್ಲಾಧಿಕಾರಿಗಳು,ವಿಲೇವಾರಿಗೆ ಕಾಲನಿಗದಿ ಮಾಡಿ ಕೆಳಹಂತದ ಅಧಿಕಾರಿಗಳಿಗೆ ಅರ್ಜಿ ವಿಲೇವಾರಿಗೆ ಮಾರ್ಗದರ್ಶನ ನೀಡುತ್ತಿದ್ದರು.ಸಿ.ಸತ್ಯಾಭಾಮ ಕಾರ್ಯವೈಖರಿ ಮತ್ತು ಬದ್ಧತೆ ಮತ್ತು ಕಂದಾಯ ಇಲಾಖೆ ಎಲ್ಲಾ ಅಧಿಕಾರಿಗಳ ಮತ್ತು ಸಿಬ್ಬಂದಿ ವರ್ಗದ ಒಗ್ಗಟ್ಟಿನ ಮಂತ್ರ, ಆಡಳಿತ ಯಂತ್ರಕ್ಕೆ ನೀಡಿದ ಚುರುಕುತನದಿಂದಾಗಿ ಕಂದಾಯ ಇಲಾಖೆ ಅರ್ಜಿ ವಿಲೇವಾರಿಯ ಪ್ರಗತಿಯಲ್ಲಿ ಹಾಸನ ಜಿಲ್ಲೆ ಪ್ರಥಮ ಸ್ಥಾನಕ್ಕೆ ತಂದು ನಿಲ್ಲಿಸಿದ್ದಾರೆ.

### ಕಂದಾಯ ಇಲಾಖೆಗೆ ಚಿಸಿ ಮುಟ್ಟಿಸಿದ ಸತ್ಯಭಾಮ

ಜಿಲ್ಲಾಧಿಕಾರಿಗಳು ಕಂದಾಯ ಇಲಾಖೆಯ ಕಾರ್ಯ ವೈಖರಿಯನ್ನು ಬದಲಾವಣೆ ಮಾಡಲೇಬೇಕು,ಜನರ ಅಲೆದಾಟ ತಪ್ಪಿಸಬೇಕು ಎಂಬ ಬಯಕೆಯಿಂದ ಕಂದಾಯ ಇಲಾಖೆಯ ಕೆಲಸದ ವೇಗವನ್ನು ಹೆಚ್ಚಿಸಿದರು. ಪ್ರತಿ ದಿನ ಜಿಲ್ಲೆಯ ಪ್ರತಿ ತಾಲೂಕಿನ ಅರ್ಜಿ ಎಷ್ಟು ವಿಲೇವಾರಿ ಆಗಿದೆ ಎಂಬ ಮಾಹಿತಿಯನ್ನು ಡಿಸಿ ಪಡೆಯುತ್ತಿದ್ದರು. ತಾಲೂಕುಗಳ ತಹಸೀಲ್ದಾರ್‌ಗಳು, ಸರ್ವೆ ಇಲಾಖೆಯ ಮೇಲ್ವಿಚಾರಕರು, , ಭೂಮಿ, ನಾಡಕಚೇರಿಯ ಸಿಬ್ಬಂದಿಗಳ ಏನು ಕೆಲಸ ಮಾಡಿದ್ದಾರೆ ಎಂಬ ಮಾಹಿತಿ ಜೊತೆಗೆ ಚರ್ಚೆ ನಡೆಸಿ ಕೆಲಸ ಆಗದಿದ್ದರೆ ಚಾರ್ಜ್ ಮಾಡಿ ಮರುದಿನ ಕೆಲಸವನ್ನು ಮುಗಿಸುವ ಕೆಲಸ ಮಾಡಿದ್ದರಿಂದ ಯಶಸ್ಸು ಸಾಧ್ಯವಾಯಿತು ಎಂದರೆ ತಪ್ಪಾಗಲಾರದು.

## ಫಾಸ್ಟ್ ನ್ಯೂಸ್

### ಟಿ. ನುಲೇನೂರು ಎಂ.ಶಂಕರಪ್ಪ ನಿಧನ

» ಚಿತ್ರದುರ್ಗ



ಜಿಲ್ಲಾನೀರಾವರಿ ಅನುಷ್ಠಾನ ಹೋರಾಟ ಸಮಿತಿ ಅಧ್ಯಕ್ಷ ಹಾಗೂ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ನುಲೇನೂರು ಎಂ. ಶಂಕರಪ್ಪ (68). ಮಂಗಳವಾರ ಚಿತ್ರದುರ್ಗದ ಖಾಸಗಿ ಆಸ್ಪತ್ರೆಯಲ್ಲಿ ನಿಧನ ಹೊಂದಿದರು. ಮೃತರು ಪತ್ನಿ, ವೈದ್ಯ ಡಾ.ರವಿಶಂಕರ್ ಸೇರಿದಂತೆ ಇಬ್ಬರು ಪುತ್ರರು, ಇಬ್ಬರು ಪುತ್ರಿಯರ ಅಗಲಿದ್ದಾರೆ. ಅಂತ್ಯಕ್ರಿಯೆ ಹುಟ್ಟೂರು ಹೊಳಲ್ಕೆರೆ ತಾಲೂಕಿನ ಟಿ.ನುಲೇನೂರು ಗ್ರಾಮದಲ್ಲಿ ಬುಧವಾರ ಸಂಜೆ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ. ಬುಧವಾರ ಬೆಳಿಗ್ಗೆ 10.30 ಕ್ಕೆ ಚಿತ್ರದುರ್ಗ ಜಿಲ್ಲಾಧಿಕಾರಿ ವೃತ್ತದಲ್ಲಿ ಸಾರ್ವಜನಿಕರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ.

### ಐಎಎಸ್, ಕೆಎಎಸ್ ಪರೀಕ್ಷೆಗಳಿಗೆ ತರಬೇತಿ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಲೋಕ ಸೇವಾ ಆಯೋಗದವರು ನಡೆಸಲಿರುವ ಐಎಎಸ್ ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದವರು ನಡೆಸಲಿರುವ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತರು ನವೆಂಬರ್ 24ರೊಳಗಾಗಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದೂರವಾಣಿ ಸಂಖ್ಯೆ 0821-2515944 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಕುಲಸಚಿವ ಪ್ರೊ.ಕೆ.ಎಲ್.ಎನ್.ಮೂರ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಿತ್ರದುರ್ಗ ಜಿಲ್ಲಾ ಯುವ ಕಾಂಗ್ರೆಸ್ ಉಸ್ತುವಾರಿಯಾಗಿ ವಿನಯ ತಿಮ್ಮಾಪುರ್ ನೇಮಕ



» ಚಿತ್ರದುರ್ಗ

ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಅವರು ಭಾರತೀಯ ಯುವ ಕಾಂಗ್ರೆಸ್ ಕರ್ನಾಟಕ ಪ್ರಭಾರಿ ಪ್ರಧಾನ ಕಾರ್ಯದರ್ಶಿ ಬಂಟಿ ಶೆಲ್ಕೆ ಮತ್ತು ರಾಜ್ಯ ಉಸ್ತುವಾರಿ ರಾಷ್ಟ್ರೀಯ ಕಾರ್ಯದರ್ಶಿ ಸಾಗರಿಕಾರಾವ್ ಅವರ ಅನುಮೋದನೆಯಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೆಲಸವನ್ನು ನಿರ್ವಹಿಸಲು ಜಿಲ್ಲಾ ಉಸ್ತುವಾರಿ ನೇಮಕ ಮಾಡಿದ್ದು ಚಿತ್ರದುರ್ಗ ಜಿಲ್ಲೆಗೆ ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿರುವ ಮತ್ತು ರಾಜ್ಯ ಸರ್ಕಾರದ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ಪುತ್ರ ವಿನಯ ತಿಮ್ಮಾಫುರ್ ಅವರನ್ನು ಚಿತ್ರದುರ್ಗ ಜಿಲ್ಲೆಗೆ ಉಸ್ತುವಾರಿ ಆಗಿ ನೇಮಿಸಲಾಗಿದೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ದಾವಣಗೆರೆ ವಿದ್ಯುತ್ ವಿತರಣಾ ಉಪ ಕೇಂದ್ರಗಳಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ನವೆಂಬರ್ 22 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಮೆಳ್ಳೇಕಟ್ಟೆ ಫೀಡರ್ ವ್ಯಾಪ್ತಿಯ ಆಲೂರು, ಬಿ.ಜಿ.ಹಳ್ಳಿ, ಸಿದ್ದನೂರು, ಮಲ್ಲಾಪುರ, ಗುಡಾಳು, ಅಣಜಿ, ಕಿತ್ತೂರು, ಕಂದನಕೋವಿ, ಮೆಳ್ಳೆಕಟ್ಟೆ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು, ಕಾಡಜ್ಜಿ ಫೀಡರ್ ವ್ಯಾಪ್ತಿಯ ರೆಡ್ಡಿ ಕ್ಯಾಂಪ್, ಪುಟಗಾನಾಳು, ಶ್ರೀರಾಮ ನಗರ, ಕಾಡಜ್ಜಿ, ಬಸವಾನಾಳು, ನಾಗರಕಟ್ಟೆ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಕುಕ್ಕವಾಡ ಫೀಡರ್ ವ್ಯಾಪ್ತಿಯ ಕುಕ್ಕವಾಡ, ಕೊಲಕುಂಟೆ, ಗಿರಿಯಾಪುರ, ಕೈದಾಳೆ, ಹದಡಿ, ಕಲಬಂಡೆ, ಲೋಕಿಕೆರೆ, ಬಲ್ಲೂರು, ಕನಗೊಂಡನಹಳ್ಳಿ, ಮತ್ತಿ, ನಾಗರಸನಹಳ್ಳಿ, ಹೊನ್ನಮರಡಿ. ಹೂವಿನಮಡು ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಮತ್ತು ಶ್ಯಾಗಲೆ ಫೀಡರ್ ವ್ಯಾಪ್ತಿಯ ಶ್ಯಾಗಲೆ, ಕಂದ್ಗಲ್ಲು, ಕೋಡಿಹಳ್ಳಿ, ಗೋಣಿವಾಡ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ಸದಾಶಿವ ಆಯೋಗದ ವರದಿ ಜಾರಿಗೊಳಿಸಿ

» ಚಿತ್ರದುರ್ಗ




ಕರ್ನಾಟಕ ರಾಜ್ಯದಲ್ಲಿ ಸದಾಶಿವ ಆಯೋಗದ ವರದಿ ಜಾರಿ ಮಾಡಿ ಒಳಮೀಸಲಾತಿ ಕಲ್ಪಿಸಲು ಬಿಎಸ್‌ಪಿ ಆಗ್ರಹಿಸಿ ಇಂದು ನಗರದಲ್ಲಿ ಪ್ರತಿಭಟನೆ ನಡೆಸಿತು.

ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನಾ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಹಾರ ಹಾಕಿದರು.

ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯ 101 ಜಾತಿಗಳ ಪೈಕಿ ಮಾದಿಗ ಮತ್ತು ಮಾದಿಗೆ ಸಂಬಂಧಿತ 49 ಜಾತಿಗಳ ಜನಸಂಖ್ಯೆ ಹೆಚ್ಚಾಗಿರುತ್ತದೆ. ಕೆಲವು ಐತಿಹಾಸಿಕ ಕಾರಣಗಳಿಂದ ಈ ಸಮಾಜಕ್ಕೆ ಶಿಕ್ಷಣ, ಸರ್ಕಾರಿ ಸೇವೆ ಮತ್ತು ರಾಜಕೀಯ ಮತ್ತಿತರರ ಎಲ್ಲಾ ರಂಗಗಳಲ್ಲಿ ಸೂಕ್ತ ಪ್ರಾತಿನಿಧ್ಯ ಇಲ್ಲದೆ ತೀರ ಹಿಂದುಳಿದಿವೆ

ಈ ಅನ್ಯಾಯವನ್ನು ಪ್ರತಿಭಟಿಸಿ ಮಾದಿಗ ಮತ್ತು ಮಾದಿಗೆ ಸಂಬಂಧಿತ ಜಾತಿಗಳಿಗೆ ಇವರ ಜನಸಂಖ್ಯೆಗೆ ಅನುಗುಣವಾಗಿ ಒಳಮೀಸಲಾತಿ ಕಲ್ಪಿಸಬೇಕೆಂದು ಕರ್ನಾಟಕದಲ್ಲಿ ಕಳೆದ 30 ವರ್ಷಗಳಿಂದ ಹಲವಾರು ಬಗೆಯ ಚಳುವಳಿಗಳು, ಪಾದಯಾತ್ರೆಗಳು ನಡೆದಿವೆ.

ತದನಂತರ ಮಾದಿಗರ ಹೋರಾಟಕ್ಕೆ ಮಣಿದು ಧರ್ಮಸಿಂಗ್ ಸರ್ಕಾರ 2005 ರಲ್ಲಿ ನ್ಯಾಯಮೂರ್ತಿ ಸದಾಶಿವ ಆಯೋಗವನ್ನು ರಚಿಸಿತು. ಈ ಆಯೋಗವು ಸತತವಾಗಿ 7 ವರ್ಷಗಳು ಅಧ್ಯಯನ ನಡೆಸಿ 2012 ರಲ್ಲಿ ಬಿಜೆಪಿಯ ಸದಾನಂದಗೌಡರವರ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿತು.

ಈ ವರದಿಯ ಸೋರಿಕೆಯಾದ ಅಂಶಗಳ ಪ್ರಕಾರ ಮಾದಿಗ ಮತ್ತು ಮಾದಿಗೆ ಸಂಬಂಧಿತ 49 ಜಾತಿಗಳಿಗೆ ಶೇ. 6% ಹೊಲೆಯ ಮತ್ತು ಹೊಲೆಯ ಸಂಬಂಧಿತ 29 ಜಾತಿಗಳಿಗೆ ಶೇ. 5% ಮತ್ತು ಭೋವಿ, ಬಂಜಾರ, ಕೊರಮ, ಕೊರಚ ಇತ್ಯಾದಿ 13 ಸ್ಪೃಶ್ಯ ಜಾತಿಗಳಿಗೆ 3% ಮತ್ತು 11 ಅಸ್ಪೃಶ್ಯ ಅಲೆಮಾರಿ ಜಾತಿಗಳಿಗೆ ಶೇ. 1% ಮೀಸಲಾತಿಯನ್ನು ಕಲ್ಪಿಸಲಾಗಿತ್ತು. ಆದರೆ ಇದೂವರೆವಿಗೂ ಸದಾಶಿವ ಆಯೋಗದ ವರದಿಯನ್ನು ಸರ್ಕಾರಗಳು ಗಂಭೀರವಾಗಿ ಪರಿಗಣಿಸಲೇ ಇಲ್ಲ.ಜಾತಿವ್ಯವಸ್ಥೆಯಲ್ಲಿ ಅತ್ಯಂತ ತಳಸಮುದಾಯವಾದ ಮಾದಿಗ ಮತ್ತು ಮಾದಿಗ ಸಂಬಂಧಿತ ಜಾತಿಗಳ ಕಣ್ಣೀರು ಒರೆಸಲು ಮೇಲ್ಜಾತಿ ಪಕ್ಷಗಳ ರಾಜಕೀಯ ಇಚ್ಛಾಶಕ್ತಿ ಕೊರತೆಯಿಂದಲೋ, ಅಸಹಾಯಕತೆಯಿಂದಲೋ ಅಥವಾ ಅಸಮರ್ಥತೆಯಿಂದಲೋ ಪರಿಹರಿಸಲು ಮುಂದಾಗುತ್ತಿಲ್ಲ. ಈ ಪ್ರಕರಣವನ್ನು ಜೀವಂತವಾಗಿ ಉಳಿಸಿಕೊಂಡು ಪರಿಶಿಷ್ಟ ಜಾತಿಗಳ ಮಧ್ಯೆ ವೈರುಧ್ಯವನ್ನು ಮುಂದುವರಿಸಿ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿದ್ದಾರೆಎಂದುದೂರಿದರು. ಚುನಾವಣೆ ಸಮಯದಲ್ಲಿ ಮಾದಿಗೆ ಮತ್ತು ಮಾದಿಗ ಸಂಬಂಧಿತ ಜಾತಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ಸದಾಶಿವ ಆಯೋಗದ ವರದಿಯನ್ನು ಜಾರಿಮಾಡುವುದಾಗಿ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಪಕ್ಷಗಳು ತಮ್ಮ ಪ್ರನಾಳಿಕೆಗಳಲ್ಲಿ ಘೋಷಣೆ ಮಾಡಿ ಗೆದ್ದ ನಂತರ ಮೌನ ವಹಿಸಿ ಈ ಸಮಾಜಕ್ಕೆ ನಿರಂತರವಾಗಿ ದ್ರೋಹ ಮಾಡುತ್ತಾ ಬಂದಿವೆ.2023ರ ಚುನಾವಣಾ ಪೂರ್ವದಲ್ಲಿ ತಮ್ಮ ಪ್ರನಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಮೊದಲನೇ ಸಚಿವ ಸಂಪುಟದಲ್ಲಿ ಚರ್ಚಿಸಿ ಸದಾಶಿವ ಆಯೋಗದ ವರದಿಯನ್ನು ಜಾರಿಗೊಳಿಸುವುದಾಗಿ ಘೋಷಣೆ ಮಾಡಿರುತ್ತದೆ. ಆದರೆ ಗೆದ್ದು ಅಧಿಕಾರಕ್ಕೆ ಬಂದು 6 ತಿಂಗಳು ಕಳೆಯುತ್ತಿದ್ದರೂ ಇದೂವರೆಗೂ ಈ ಬಗ್ಗೆ ಮೌನವಹಿಸಿರುವುದು ಖಂಡನೀಯ, ಪರಿಶಿಷ್ಟ ಜಾತಿಯ ಮೀಸಲಾತಿ ಹಂಚಿಕೆಯಲ್ಲಿ ತಾರತಮ್ಯ ಸೃಷ್ಟಿಗೆ ಕಾರಣ 75 ವರ್ಷಗಳು ರಾಜ್ಯವಾಳಿದ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಪಕ್ಷಗಳೇ ಹೊಣೆ ಎಂಬುದನ್ನುಅರ್ಥಮಾಡಿಕೊಳ್ಳಬೇಕಾಗಿದೆ ಎಂದಿದ್ದಾರೆ.

ಸರ್ಕಾರದ ಈ ನಿರ್ಲಕ್ಷತೆ ಬಗ್ಗೆ ಮೀಸಲಾತಿ-ವಂಚಿತ ಓಬಿಸಿ ಸಮುದಾಯಗಳು ಮತ್ತು ಬಹುಜನ ಸಮಾಜ ಪಾರ್ಟಿಯು ಕಾಂತರಾಜ್ ವರದಿ ಜಾರಿಗಾಗಿ ಒತ್ತಾಯಕ್ಕೆ ಮುಂದಾದವು. ಈ ನಡುವೆ, ಲಿಂಗಾಯತ-ಒಕ್ಕಲಿಗ ಸ್ವಾಮೀಜಿಗಳು ಮತ್ತು ರಾಜಕಾರಣಿಗಳು ಈ ವರದಿಯನ್ನು ಜಾರಿ ಮಾಡದಿರುವಂತೆ ಸರ್ಕಾರದ ಮೇಲೆ ಒತ್ತಡ ಹಾಕುತ್ತಿದ್ದಾರೆ.

ಜನಸಂಖ್ಯೆಯ ವರದಿಯು ತಪ್ಪಾಗಿದೆ ಎನ್ನುತ್ತಾ, ಮತ್ತೊಮ್ಮೆ ವೈಜ್ಞಾನಿಕವಾಗಿ ಜನಗಣತಿ ನಡೆಯಬೇಕೆನ್ನುತ್ತಿದ್ದಾರೆ. ಹೀಗೆ, ಮೇಲ್ಜಾತಿ ಸರ್ಕಾರಗಳು ಹಿಂದುಳಿದ ಜಾತಿಗಳಿಗೆ ವಂಚನೆ ಮುಂದುವರೆಸಲು ಏನೇನೋ ಸಬೂಬು ಹೇಳುತ್ತಾ ಚಳ್ಳೆಹಣ್ಣು ತಿನ್ನಿಸುತ್ತಾ ಬಂದಿವೆ; ಆಯೋಗಗಳ ಮೇಲೆ ಆಯೋಗಗಳನ್ನು ರಚಿಸುತ್ತ, ಸಾರ್ವಜನಿಕರ ಹಣವನ್ನು ಪೋಲು ಮಾಡುತ್ತಾ ಅತಿ ಹಿಂದುಳಿದ ನೂರಾರು ಜಾತಿಗಳನ್ನು ಕಳೆದ 75 ವರ್ಷಗಳಿಂದ ವಂಚಿಸಿ ಮಂಗ ಮಾಡುತ್ತಿದ್ದಾರೆ.

ಪರಿಶಿಷ್ಟ ಜಾತಿಯ 101 ಜಾತಿಗಳ ಪೈಕಿ ಮಾದಿಗ ಮತ್ತು ಮಾದಿಗ ಸಂಬಂಧಿತ 49 ಜಾತಿಗಳ ಜನಸಂಖ್ಯೆ ಹೆಚ್ಚಾಗಿರುತ್ತದೆ. ಕೆಲವು ಐತಿಹಾಸಿಕ ಕಾರಣಗಳಿಂದ ಈ ಸಮಾಜಕ್ಕೆ ಶಿಕ್ಷಣ, ಸರ್ಕಾರಿ ಸೇವೆ ಮತ್ತು ರಾಜಕೀಯ ಮತ್ತಿತರರ ಎಲ್ಲಾ ರಂಗಗಳಲ್ಲಿ ಸೂಕ್ತ ಪ್ರಾತಿನಿಧ್ಯ ಇಲ್ಲದೆ ತೀರ ಹಿಂದುಳಿದಿವೆ.ಪರಿಶಿಷ್ಟ ಜಾತಿಯ ಮೀಸಲಾತಿ ಹಂಚಿಕೆಯಲ್ಲಿ ತಾರತಮ್ಯ ಸೃಷ್ಟಿಗೆ ಕಾರಣ 75 ವರ್ಷಗಳು ರಾಜ್ಯವಾಳಿದ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಪಕ್ಷಗಳೇ ಹೊಣೆ ಎಂಬುದನ್ನು ಅರ್ಥಮಾಡಿಕೊಳ್ಳಬೇಕಾಗಿದೆ. ಈ ಹಿನ್ನಲೆಯಲ್ಲಿ ಸಂವಿಧಾನದ ಆಶಯದಂತೆ ಸಾಮಾಜಿಕ ನ್ಯಾಯ ಎತ್ತಿಹಿಡಿಯುವ ಕಾಂತರಾಜು ಆಯೋಗದ ವರದಿ ಮತ್ತು ಸದಾಶಿವ ಆಯೋಗದ ವರದಿಯನ್ನು ವಿಧಾನಸಭೆಯಲ್ಲಿ ಮಂಡಿಸಿ, ಚರ್ಚಿಸಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಕರ್ನಾಟಕ ಸರ್ಕಾರವನ್ನು ಆಗ್ರಹಿಸಲಾಯಿತು. ಬಿಎಸ್‌ಪಿ ಜಿಲ್ಲಾ ಸಂಯೋಜಕರಾದ ಕೆ.ಎನ್. ದೊಡ್ಡಟ್ಟಪ್ಪ, ಹೆಚ್.ಎನ್. ಶಿವಮೂರ್ತಿ, ಜಿಲ್ಲಾಧ್ಯಕ್ಷರಾದ ಎನ್.ಪ್ರಕಾಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹನುಮಂತರಾಯ್ ಜಿಲ್ಲಾ ಕಾರ್ಯದರ್ಶಿ ಶ್ರೀನಿವಾಸ್, ಜಗದೀಶ್, ಉಪಾಧ್ಯಕ್ಷರಾದ ಲಕ್ಷ್ಮಮ್ಮ, ಹಿರಿಯೂರು ತಾ.ಅಧ್ಯಕ್ಷ ಮಹಲಿಂಗಪ್ಪ, ಮೊಳಕಾಲ್ಮೂರು ತಾ.ಅಧ್ಯಕ್ಷ ಶಿವಕುಮಾರ್ ಹೊಳಲ್ಕೆರೆ ತಾ.ಅಧ್ಯಕ್ಷ ಆಕಾಶ್, ಹೊಸದುರ್ಗ ತಾ.ಆಧ್ಯಕ್ಷ ಕರಿಬಸಪ್ಪ ಚಳ್ಳಕೆರೆ ತಾ.ಅಧ್ಯಕ್ಷ ನರಸಿಂಹಮೂರ್ತಿ ಭಾಗವಹಿಸಿದ್ದರು.

### ವಿಶೇಷ ಆರೋಗ್ಯ ಮೇಳದಲ್ಲಿ ಮಕ್ಕಳ ತಜ್ಞ ಡಾ.ಜಿ.ಆರ್.ತಿಮ್ಮೇಗೌಡ ಸಲಹೆ

# ತಜ್ಞವೈದ್ಯಕೀಯ ಸೇವೆಯ ಸದುಪಯೋಗ ಪಡೆಯಿರಿ

» ಚಿತ್ರದುರ್ಗ



ಆಯುಷ್ಮಾನ್ ಭನ ಕಾರ್ಯಕ್ರಮದಡಿಯಲ್ಲಿ ಆರೋಗ್ಯ ತಪಾಸಣಾ ಕಾರ್ಯಕ್ರಮ ಹಮಿಕೊಂಡಿದ್ದು, ವಿಶೇಷ ತಜ್ಞವೈದ್ಯರಿಂದ ವೈದ್ಯಕೀಯ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಹಾಗೂ ಮಕ್ಕಳ ತಜ್ಞ ಡಾ.ಜಿ.ಆರ್.ತಿಮ್ಮೇಗೌಡ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಆಯುಷ್ಮಾನ್ ಭವ ಕಾರ್ಯಕ್ರಮದಡಿ ಆರೋಗ್ಯ ತಪಾಸಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಆಯುಷ್ಮಾನ್ ಭವ ಕಾರ್ಯಕ್ರಮದ ಆಂದೋಲನದ ಅಂಗವಾಗಿ ಆಯುಷ್ಮಾನ್ ಕಾರ್ಡ್‌ಗಳ ನೋಂದಣಿ ಮತ್ತು ವಿತರಣೆ ಮಾಡಲಾಗುತ್ತದೆ. ಈ ಕಾರ್ಯಕ್ರಮದಡಿಯಲ್ಲಿ ಮನೆ ಬಾಗಿಲಿಗೆ ಆಯುಷ್ಮಾನ್ ಕಾರ್ಡ್‌ಗಳನ್ನು ನೀಡಲಾಗುವುದು. ಅಲ್ಲದೆ ಅಸಾಂಕ್ರಾಮಿಕ ರೋಗಗಳ ಪತ್ತೆ ಹಾಗೂ ತಪಾಸಣೆ, ಕ್ಷಯ ರೋಗ, ಮಲೇರಿಯಾ ಡೆಂಗ್ಯೂ ಚಿಕನ್ ಗುನ್ಯಾ ಕೀಟ ಜನ ರೋಗಗಳು ಕುಷ್ಠರೋಗ ಹಾಗೂ ಇತರೆ ಸಾಂಕ್ರಾಮಿಕ ರೋಗಗಳ ತಪಾಸಣಾ ಶಿಬಿರ, ತಾಯಿ ಮತ್ತು ಮಕ್ಕಳ ಆರೋಗ್ಯ ಹಾಗೂ ಪೌಷ್ಠಿಕ ಆರೋಗ್ಯ ಶಿಬಿರ, ಸಿಕ್ಕಲ್ ಸೆಲ್ ಅನಿಮೀಯಾ ತಪಾಸಣೆ (ಬುಡಕಟ್ಟು ಜನಾಂಗದವರಿಗೆ) ಇತರೆ ಪ್ರದೇಶದಲ್ಲಿ ಕಣ್ಣಿನ ತಪಾಸಣೆ ಹಾಗೂ ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರಿಂದ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುವುದು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ಜಿಲ್ಲೆಯಲ್ಲಿ ಆಯುಷ್ಮಾನ್ ಭವ ಯೋಜನೆಯಡಿ ಪ್ರತಿ ಮಂಗಳವಾರ 11 ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ 5 ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳನ್ನು ನಿಯೋಜಿಸಿ ಆರೋಗ್ಯ ಮೇಳ ಕೈಗೊಂಡು ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಸಲಾಗುತ್ತಿದೆ ಎಂದರು.

ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮತ್ತು ಆರೋಗ್ಯ ಕ್ಷೇಮ ಉಪ ಕೇಂದ್ರಗಳಲ್ಲಿ ಸಾಂಕ್ರಾಮಿಕವಲ್ಲದ ರೋಗಗಳಾದ ಮಧುಮೇಹ, ರಕ್ತದ ಒತ್ತಡ, ಕ್ಯಾನ್ಸರ್ ಹೃದಯ ರೋಗ, ಇತರೆ ರೋಗಗಳ ತಪಾಸಣೆ ನಡೆಸಲಾಗುತ್ತದೆ. ಉಚಿತ ಚಿಕಿತ್ಸೆ ಮತ್ತು ನಿರ್ದೇಶನ ಮಾಡಲಾಗುತ್ತಿದೆ.

ಅಲ್ಲದೆ ಸಕ್ರಿಯ ಕ್ಷಯ ರೋಗಪತ್ತೆ ಕುಷ್ಠರೋಗ ತಪಾಸಣೆ, ಯೋಗ ಶಿಕ್ಷಣ,ಕುಟುಂಬ ಕಲ್ಯಾಣ ಯೋಜನೆ ಅನುಷ್ಠಾನ, ಆಯುಷ್ಮಾನ್ ಭವ ಯೋಜನೆಯಲ್ಲಿ ದೊರೆಯುವ ಸೇವಾ ಸವಲತ್ತುಗಳು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳು ಗರ್ಭಿಣಿ ತಪಾಸಣೆ ಬಾಣಂತಿ ಆರೈಕೆ ಮಕ್ಕಳಿಗೆ ಲಸಿಕೆ ಆರೋಗ್ಯ ಇಲಾಖೆಯ ಇತರೆ ಎಲ್ಲಾ ಕಾರ್ಯಕ್ರಮಗಳನ್ನು ಆರೋಗ್ಯ ತಪಾಸಣೆಯೊಂದಿಗೆ ಪರಿಚಯಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಹೆರಿಗೆ ಮತ್ತು ಸ್ತ್ರೀರೋಗ ತಜ್ಞರಾದ ಡಾ.ಬಿ.ಶ್ರೀಜಾ, ದಂತ ವೈದ್ಯೆ ಡಾ.ಕೆ.ಬಿಂದು, ಫಾರ್ಮಸಿ ಅಧಿಕಾರಿ ಮೋಹನ್, ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಶುಶ್ರೂಷಕಿ ಕ್ಲಾರ, ನೇತ್ರಾಧಿಕಾರಿ ಬರ್ಕತ್ ಅಲಿ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಪ್ರಯೋಗಶಾಲಾ ತಂತ್ರಜ್ಞರು ಇದ್ದರು.

### ಅಸ್ಪೃಶ್ಯತಾ ಆಚರಣೆ

# ಮನುಕುಲಕ್ಕೆ ಅಂಟು ಜಾಡ್ಯ



» ಚಿತ್ರದುರ್ಗ

ನ,21 ಪಟ್ಟಭದ್ರ ಹಿತಾಸಕ್ತಿಗಳು, ಜಾತಿ ವ್ಯವಸ್ಥೆಯನ್ನು ಹುಟ್ಟು ಹಾಕಿ ಮೇಲು-ಕೀಳು ಎಂದು ಅಸಮಾನತೆಯನ್ನು ಉಂಟುಮಾಡಿದ ಕೆಲವರು ಅಸ್ಪೃಶ್ಯತೆಯನ್ನು ಆಚರಿಸುವ ಮೂಲಕ ಇಂದಿಗೂ ಸಮಾಜದಲ್ಲಿ ಅಸಮತೋಲನವನ್ನು ಕಾಯ್ದುಕೊಂಡು ಬಂದಿರುವುದು ಇದೊಂದು ಸಮಾಜಕ್ಕೆ ಅಂಟು ಜಾಡ್ಯವಾಗಿದೆ ಎಂದು ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆಯ ಅಧ್ಯಕ್ಷನರೇನಹಳ್ಳಿ ಅರುಣ್‌ಕುಮಾರ್ ಹೇಳಿದರು. ಚಿತ್ರದುರ್ಗ ತಾಲ್ಲೂಕಿನ ತಮಟಕಲ್ಲು ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕು ಆಡಳಿತ, ಪೊಲೀಸ್ ಇಲಾಖೆ ಹಾಗೂ ಭೀಮಾ ಅಧ್ಯಯನ ಕೇಂದ್ರ ಇವರ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಬಸವಣ್ಣನವರ ಕಾಲಘಟ್ಟದಲ್ಲೇ ಸಮಾಜದಲ್ಲಿ ಸಮಾನತೆ ತರಲು ಮತ್ತು ಜಾತಿ ವ್ಯವಸ್ಥೆ ನಿರ್ಮೂಲನೆ ಮಾಡಲು ಅಂತರ್ಜಾತಿ ವಿವಾಹವನ್ನು ಮಾಡಿಸುವ ಮೂಲಕ ಸಮಾನತೆ ತಂದಿದ್ದರು. ಆದರೆ ಬ್ರಾಹ್ಮಣ, ಕ್ಷತ್ರಿಯ, ವೈಶ್ಯ, ಶೂದ್ರ ಮತ್ತು ದಲಿತ ಎಂದು ಪರಿಗಣಿಸುವ ಮೂಲಕ ಅಸ್ಪೃಶ್ಯತೆಯನ್ನು ಆಚರಣೆಗೆ ತರುವ ಮೂಲಕ ಸಮಾಜದಲ್ಲಿ ಅಸಮಾನತೆಯನ್ನು ಉಂಟುಮಾಡಿ, ಇಂದಿಗೂ ಸಹ ಅಸ್ಪೃಶ್ಯತೆ ಆಚರಿಸಿಕೊಂಡು ಬರಲಾಗಿರುವುದು ಮನುಕುಲಕ್ಕೆ ಅಂಟಿದ ಅಂಟು ಜಾಡ್ಯವಾಗಿದೆ ಎಂದು ಹೇಳಿದರು.ಸಮಾಜ ಕಲ್ಯಾಣ ಇಲಾಖೆಯಿಂದ ಅರಿವು ಮೂಡಿಸುವ ಕಾರ್ಯಕ್ರಮ ರೂಪಿಸುವ ಮೂಲಕ ಅಸ್ಪೃಶ್ಯತಾ ನಿವಾರಣೆಗೆ ಹಲವು ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸಿ, ಸಮಾಜದಲ್ಲಿ ಸಮಾನತೆ ತರವು ಪ್ರಯತ್ನವೊಂದಕ್ಕೆ ಚಾಲನೆ ನೀಡಲಾಗಿದ್ದು, ಆ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದಲ್ಲಿ ಎಲ್ಲಾ ಜಾತಿ, ಜನಾಂಗದವರನ್ನು ಒಂದು ಕಡೆ ತಂದು, ಜಾಗೃತಿ ಮೂಡಿಸುವ ಕಾರ್ಯಕ್ರಮ ನಡೆಸುವ ಮೂಲಕ ಸಮ-ಸಮಾಜ ನಿರ್ಮಾಣಕ್ಕೆ ಮುಂದಾಗಿರುವುದು ಪ್ರಶಂಸನೀಯ ಎಂದು ಹೇಳಿದರು.

## ಪ್ರಮುಖ ಸುದ್ದಿ

# ರೈತ, ಕೃಷಿಕ, ಕಾರ್ಮಿಕರನ್ನು ಬೀದಿಗೆ ತಳ್ಳಿರುವ ಕೇಂದ್ರ, ರಾಜ್ಯ

» ದಾವಣಗೆರೆ




ಮಾರಕ ಕಾಯಿದೆಗಳನ್ನು ಜಾರಿಗೆ ತರುವ ಮೂಲಕ ಕೇಂದ್ರ ಮತ್ತು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸರ್ಕಾರಗಳು ರೈತರು, ಕೃಷಿಕರು ಮತ್ತು ಕಾರ್ಮಿಕರನ್ನು ಬೀದಿಗೆ ತಳ್ಳಿ ಅವರ ಸಂಕಷ್ಟವನ್ನು ನೋಡಿ ಗಹಗಹಿಸಿ ನಗುತ್ತಿವೆ ಎಂದು ಅಖಿಲ ಭಾರತ ಕಿಸಾನ್ ಸಭಾದ ರಾಜ್ಯ ಕಾರ್ಯದರ್ಶಿ ಪಿ.ವಿ.ಲೋಕೇಶ್ ಆಕ್ರೋಶ ವ್ಯಕ್ತ ಪಡಿಸಿದರು.

ರೈತ ಹಾಗೂ ಕಾರ್ಮಿಕ ವಿರೋಧಿ ನೀತಿಗಳನ್ನು ಧಿಕ್ಕರಿಸಿ ನವೆಂಬರ್ 26ರಿಂದ 28 ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ಮಹಾ ಧರಣಿ ಕಾರ್ಯಕ್ರಮದ ಪೂರ್ವಭಾವಿಯಾಗಿ ನಗರದ ಎಪಿಎಂಸಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

2 ವರ್ಷಗಳ ಹಿಂದೆ ಕಾರ್ಮಿಕರು, ರೈತರಿಗೆಮಾರಕವಾದಕೃಷಿಮತ್ತುಕಾರ್ಮಿಕ ಕಾಯಿದೆಗಳನ್ನು ಜಾರಿಗೆ ತಂದರು. ಕೇಂದ್ರ ಸರ್ಕಾರದ ವಿರುದ್ಧ ಹಗಲು ರಾತ್ರಿಯೆನ್ನದೇ ರೈತರು ದೆಹಲಿಯಲ್ಲಿ ಧರಣಿ, ಉಪವಾಸ ಸತ್ಯಾಗ್ರಹ ಸೇರಿದಂತೆ ಹಲವಾರು ಹೋರಾಟಗಳನ್ನು ಮಾಡಿದರು. ಇದಕ್ಕೆ ವಿರುದ್ಧವಾಗಿ ಕೇಂದ್ರ ಸರ್ಕಾರ ಹಲವು ಕುತಂತ್ರಗಳನ್ನು ನಡೆಸಿ ರೈತರ ಹೋರಾಟ ಹತ್ತಿಕ್ಕಲು ಪ್ರಯತ್ನಿಸಿತು. ಆದರೂ ರೈತರು ಹಿಮ್ಮೆಟ್ಟಲಿಲ್ಲ. ಅಂತಿಮವಾಗಿ ರೈತರ ಮುಂದೆ ಮಂಡಿಯೂರಿ ನಿಂತ ನರೇಂದ್ರ ಮೋದಿಯವರು ವಾಪಾಸ್ಸು ಪಡೆದಿದ್ದಾರೆ. ಆದರೆ, ರಾಜ್ಯ ಸರ್ಕಾರ ಮಾತ್ರ ಎಪಿಎಂಸಿ, ಕೃಷಿ ಹಾಗೂ ವಿದ್ಯುತ್ ಕಾಯಿದೆಯನ್ನು ವಾಪಾಸು ಪಡೆದಿಲ್ಲ ಎಂದು ಅಸಮಾಧಾನ ವ್ಯಕ್ತ ಪಡಿಸಿದರು.

ಕಾರಣ ಕೇಂದ್ರ ಸರ್ಕಾರ ಇನ್ನಾದರೂ ದೂರಾಲೋಚನೆ, ಬಂಡವಾಳ ಶಾಹಿ ಪರವಾದ ನೀತಿಗಳನ್ನು ಬಿಟ್ಟು ಜನಸಾಮಾನ್ಯರಿಗೆ ಅನುಕೂಲ ಆಗುವಂತೆ ಕಾಯಿದೆಗಳನ್ನು ರೂಪಿಸಬೇಕೆಂದು ಆಗ್ರಹಿಸಿ ಬೆಂಗಳೂರಿನಲ್ಲಿ ಮಹಾಧರಣಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ರೈತ ಮುಖಂಡ ಕುರುವ ಗಣೇಶ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಮೂರು ತಿಂಗಳಲ್ಲೇ ಎಪಿಎಂಸಿ, ಕೃಷಿ, ವಿದ್ಯುತ್ ಕಾಯಿದೆಯನ್ನು ವಾಪಾಸು ಪಡೆದು ರೈತರ ಬದುಕನ್ನು ಹಸನು ಮಾಡುತ್ತೇವೆ ಎಂದು ವಾಗ್ದಾನ ನೀಡಿತ್ತು. ಆದರೆ ಚುನಾವಣೆ ವೇಳೆ ನೀಡಿದ ಯಾವುದೇ ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಕಣ್ಣಿದ್ದು ಕುರುಡಾಗಿ, ಕಿವಿ ಇದ್ದು ಕಿವುಡಾಗಿ ವರ್ತಿಸುತ್ತಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು.

ಸಮಾವೇಶದ ಅಧ್ಯಕ್ಷತೆ ವಹಿಸಿದ್ದ ಎಐಕೆಎ□□ನ ಜಿಲ್ಲಾ ಸಂಚಾಲಕ ಆವರಗೆರೆ ಹೆಚ್.ಜಿ.ಉಮೇಶ್ ಮಾತನಾಡಿ, ನಮ್ಮನ್ನು ಆಳುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜನ ವಿರೋಧಿ ನೀತಿಯಿಂದ ಹಿಂದೆ ಸರಿಯಬೇಕು. ರೈತರು, ಕೃಷಿಕರು, ಕಾರ್ಮಿಕರ ಮೇಲೆ ಮಾರಕವಾದ ಕಾಯಿದೆಗಳನ್ನು ಹೇರುವುದಲ್ಲದೇ, ಅವರ ಹೋರಾಟದ ಮೇಲೆ ಗಧಾಪ್ರಹಾರ ಮಾಡುವುದನ್ನು ಬಿಟ್ಟು ಅವರ ಶ್ರೇಯೋಭಿವೃದ್ಧಿ, ಕ್ಷೇಮಾಭಿವೃದ್ಧಿಗೆ ಪೂರಕವಾಗಿ ಆಡಳಿತ ನಡೆಸಬೇಕೆಂದು ಆಗ್ರಹಿಸಿದರು.ಆರಂಭದಲ್ಲಿಪ್ರಾಸ್ತಾವಿಕವಾಗಿ ಎಐಕೆಕೆಎಂಎ□□ನ ಜಿಲ್ಲಾಧ್ಯಕ್ಷ ಮಧು ತೊಗಲೇರಿ ಮಾತನಾಡಿದರು. ಜನಶಕ್ತಿ ಸಂಘಟನೆಯ ಸತೀಶ್ ಅರವಿಂದ್, ಕೈದಾಳೆ ಮಂಜುನಾಥ್, ಕೆ.ಹೆಚ್. ಆನಂದರಾಜ್, ಹೊನ್ನೂರು ಮುನಿಯಪ್ಪ, ಹೆಗ್ಗೆರೆ ರಂಗಪ್ಪ, ಇದ್ದರು.

# ಅವೈಜ್ಞಾನಿಕ ಡಿವೈಡರ್ ತೆರವು ಮಾಡಿ ಜೀವ ಉಳಿಸಿ

» ಚಿತ್ರದುರ್ಗ

ಕೋಟೆ ನಾಡು ಚಿತ್ರದುರ್ಗ ನಗರದಲ್ಲಿ ಸದ್ದು ಮಾಡುತ್ತಲೇ ಇದೆ. ನಗರದ ಚಳ್ಳಕೆರೆ ಗೇಟ್‌ನಿಂದ ಬ್ರಿಡ್ಜ್ ಕೆಳಗಿನಿಂದ ಬಂದು ಬಿ.ಡಿ.ರಸ್ತೆಗೆ ಸಂಪರ್ಕಿಸುವ ಮಾರ್ಗದಲ್ಲಿ ಅವೈಜ್ಞಾನಿಕವಾಗಿ ಡಿವೈಡರ್ ನಿರ್ಮಿಸಿದ್ದು ಕೂಡಲೇ 50 ಮೀಟರ್‌ನಷ್ಟು ತೆರವುಗೊಳಿಸಬೇಕು ಎಂದು ಒತ್ತಾಯಿಸಿ ನಗರಸಭೆಯ ಹಾಲಿ, ಮಾಜಿ ಸದಸ್ಯರು ಮತ್ತು ಸಾರ್ವಜನಿಕರು ಮಂಗಳವಾರ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಒಂದು ಗಂಟೆಗೂ ಹೆಚ್ಚು ಸಮಯ ಪ್ರತಿಭಟನೆ ನಡೆಸಿದ ಕಾರಣ ಸಂಚಾರಕ್ಕೆ ಈ ಸ್ಥಳದಲ್ಲಿ ಟ್ರಾಫಿಕ್ ಜಾಮ್ ಆಗಿತ್ತು. ಡಿವೈಡರ್ ತೆರವುಗೊಳಿಸಲು ಕ್ರಮ ವಹಿಸದೆ ಹೊರತು ಇಲ್ಲಿಂದ ಜಾಗ ಖಾಲಿ ಮಾಡುವುದಿಲ್ಲ ಎಂದು ಪ್ರತಿಭಟನಾಕಾರರು ಬಿಗಿ ಪಟ್ಟು ಹಿಡಿದು ಆಕ್ರೋಶ ವ್ಯಕ್ತಪಡಿಸಿದರು. ಪೊಲೀಸರು ಸಮಧಾನಪಡಿಸಿ ಮುಂದಾದರು ಸೊಪ್ಪು ಹಾಕಲಿಲ್ಲ. ನಗರಸಭೆ ಮಾಜಿ ಅಧ್ಯಕ್ಷ ಬಿ.ಕಾಂತರಾಜ್ ಮಾತನಾಡಿ, ಚಳ್ಳಕೆರೆ, ಬೆಂಗಳೂರಿನಿಂದ ನಗರ ಪ್ರವೇಶಿಸುವ, ನಗರದೊಳಗಿನಿಂದ ಬರುವ ವಾಹನಗಳು ತಿರುವು ಪಡೆಯುವಾಗ ಒಂದಕ್ಕೊಂದು ಕಾಣದಂತೆ ಅವೈಜ್ಞಾನಿಕವಾಗಿ ರಸ್ತೆ ಡಿವೈಡರ್ ನಿರ್ಮಿಸಿರುವ ಕಾರಣ



ಅಪಘಾತಗಳು ಹೆಚ್ಚು ಸಂಭವಿಸುತ್ತಿವೆ. ವಾಹನಗಳಿಗೆ ಹಾನಿ ಆಗುತ್ತಿದೆಯೇ ಹೊರತು ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಈ ಭಾಗದಲ್ಲಿ ಅತಿ ಹೆಚ್ಚು ಶಾಲಾ ಕಾಲೇಜು ವಾಹನಗಳು ಸಹ ಸಂಚರಿಸುತ್ತಿದ್ದು ಪೋಷಕರು ಜೀವ ಬಿಗಿ ಹಿಡಿದುಕೊಂಡು ವಾಹನ ಚಲಾಯಿಸುತ್ತಿದ್ದು ಅಪಘಾತದಿಂದ ಯಾರಾದರೂ ಮೃತಪಟ್ಟರೆ, ಯಾರು ಹೊಣೆ ಎಂದು ಪ್ರಶ್ನಿಸಿದರು.

ಈ ಮಾರ್ಗದಲ್ಲಿ ಹೆಚ್ಚಾಗಿ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ನಡೆದುಕೊಂಡು, ವಾಹನಗಳಲ್ಲಿ ಬರುತ್ತಾರೆ. ಕೆಲವೊಮ್ಮೆ ಅಪಘಾತಗಳಾಗಿವೆ. ಮಕ್ಕಳಿಗೂ ತೊಂದರೆಯಾಗುವ ಸಾಧ್ಯತೆಗಳೇ ಹೆಚ್ಚಿದೆ. ಆದ್ದರಿಂದ ತೆರವುಗೊಳಿಸಲೇಬೇಕು ಎಂದು ಒತ್ತಾಯಿಸಿದರು.

ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲೂ ತೆರವುಗೊಳಿಸಲು ತೀರ್ಮಾನಿಸಲಾಗಿದೆ. ಅಲ್ಲದೆ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಆಮ್ಲಾನ್ ಆದಿತ್ಯ ಬಿಸ್ವಾಸ್ ಅವರು ಕೂಡ ಅವೈಜ್ಞಾನಿಕವೆಂದು ಹೇಳಿ ತೆರವಿಗೆ ಕ್ರಮವಹಿಸುವುದಾಗಿ ಹೇಳಿದ್ದರು. ಪೊಲೀಸರಿಗೆ ಇಲ್ಲಿನ ಸಮಸ್ಯೆ ತಿಳಿದಿದ್ದರೂ ಸಂಬಂಧಿಸಿದವರ ಗಮನಕ್ಕೆ ತರುತ್ತಿಲ್ಲ. ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅರವಿಂದ್ ಗಾರ್ಮೆಂಟ್ಸ್ ಮುಂಭಾಗ ಈ ಹಿಂದೆ ರಸ್ತೆ ವಿಭಜಕ ನಿರ್ಮಿಸಿ, ಮೂರು ದಿನದಲ್ಲಿ ಅಧಿಕಾರಿಗಳು ತೆರವುಗೊಳಿಸಿದ್ದಾರೆ. ಸಾರ್ವಜನಿಕ ಹಿತಾಸಕ್ತಿಗಾಗಿ ನಾವು ಪ್ರತಿಭಟಿಸಿದರೆ, ಕಾನೂನಿನ ಬಗ್ಗೆ ಮಾತನಾಡುತ್ತಾರೆ. ಆಗ ಅಡ್ಡಿಯಾಗದ ಕಾನೂನು ಹೀಗೇಕೆ ಎಂದು ಪ್ರಶ್ನಿಸಿದರು. ಭರವಸೆ ಆಗದೆ, ಕಾರ್ಯಗತವಾಗಬೇಕು. ಇಲ್ಲದಿದ್ದರೆ, ಜೆಸಿಬಿ ಯಂತ್ರದ ಮೂಲಕ ತೆರವುಗೊಳಿಸಲಾಗುವುದು. ಯಾವುದೇ ಪ್ರಕರಣ ದಾಖಲಿಸಿದರೂ ಎದುರಿಸಲು ಸಿದ್ಧರಿದ್ದೇವೆ ಎಂದು ಎಚ್ಚರಿಸಿದರು.

ನಗರಸಭೆ ಸದಸ್ಯ ಜೆ.ಎಸ್.ದೀಪಕ್, ಮುಖಂಡರಾದಅಂಜಿನಪ್ಪ,ಪಿ.ತಿಪ್ಪೇಸ್ವಾಮಿ, ಮಂಜುನಾಥ್, ಎಸ್.ನಾಗೇಶ್, ಆರ್. ಮಂಜುನಾಥ್, ವಿ.ಎನ್.ರುಜತ್, ಜಗದೀಶ್, ಎನ್.ಶರಣಪ್ಪ, ಓಬಳೇಶ, ಎನ್.ಪ್ರವೀಣ್, ಕೆ.ಎನ್.ಸುನೀಲ್, ಶಿವು, ಹರೀಶ್, ಕೆ.ವಿನಾಯಕ, ಆರ್.ಅನುಕುಮಾರ್, ಸಿ.ಏಕಾಂತ, ಬಿ.ಮಂಜುನಾಥ್, ಟಿ.ಆರ್.ಗುರುಪ್ರಸಾದ್ ಸೇರಿ ನೂರಾರು ಮಂದಿ ಇದ್ದರು.

> ಶಾಸಕರು, ಜಿಲ್ಲಾಧಿಕಾರಿಗಳ ಜೊತೆ ಚರ್ಚಿಸಿ ಸಾರ್ವಜನಿಕರಿಗೆ ನಿತ್ಯ ಆಗುತ್ತಿರುವ ತೊಂದರೆ ಮನವರಿಕೆ ಮಾಡಿ ಮುಂದಿನ 20 ದಿನದೊಳಗೆ ತೆರವಿಗೆ ಕ್ರಮವಹಿಸಲಾಗುವುದು.
> » **ಎಂ.ರೇಣುಕಾ, ನಗರಸಭೆ ಪೌರಾಯುಕ್ತೆ**

## ಫಾಸ್ಟ್ ನ್ಯೂಸ್

### ನ. 25 ರಂದು ಕನ್ನಡ ರಾಜ್ಯೋತ್ಸವ ಹಾಗೂ ನಾಗತಿಹಳ್ಳಿಮಂಜುನಾಥ್ ಅವರ ಹೊನ್ನಾರ ಕೃತಿ ಲೋಕಾರ್ಪಣೆ




» ಹೊಸದುರ್ಗ

ಸಜ್ಞಾನ ಎಜುಕೇಷನಲ್ ಟ್ರಸ್ಟ್ (ರಿ) ಸನ್‌ಶೈನ್ ಪಬ್ಲಿಕ್ ಸ್ಕೂಲ್ ಸಿದ್ದಗೊಂಡನಹಳ್ಳಿ ಮತ್ತೋಡು



ಹೊಸದುರ್ಗ ತಾಲೂಕು ಇದರ ಆಶ್ರಯದಲ್ಲಿ ನವಂಬರ್ 25 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ತಾಲೂಕಿನ ಮತ್ತೋಡು ಹೋಬಳಿ ಸಿದ್ದಗೊಂಡನಹಳ್ಳಿ ಮತ್ತೋಡು ಗ್ರಾಮದ ಸನ್‌ಶೈನ್ ಪಬ್ಲಿಕ್ ಸ್ಕೂಲ್ ಸಭಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ಹಾಗೂ ನಾಗತಿಹಳ್ಳಿಮಂಜುನಾಥ್ ಅವರ "ಹೊನ್ನಾರ"ಕೃತಿ (ಕವನಸಂಕಲನ)ಬಿಡುಗಡೆಸಮಾರಂಭಜರುಗಲಿದೆ ಎಂದು ಸಾಹಿತಿ ನಾಗತಿಹಳ್ಳಿಮಂಜುನಾಥ್ ತಿಳಿಸಿದ್ದಾರೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಕಾರ್ಯಕ್ರಮವನ್ನು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ಹೆಚ್.ಬಿಲ್ಲಪ್ಪ ಅವರು ಉದ್ಘಾಟನೆ ಮಾಡಲಿದ್ದು ಸನ್‌ಶೈನ್ ಪಬ್ಲಿಕ್ ಸ್ಕೂಲ್‌ನ ಅಧ್ಯಕ್ಷರಾದ ಸಫಾರಿ ಎಂ. ಶಿವಲಿಂಗಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಶಿಕ್ಷಣ ಇಲಾಖೆಯ ನಿವೃತ್ತ ಡಿಡಿಪಿಐ ಎನ್.ಎಂ.ರಮೇಶ್ ಅವರು ನಾಗತಿಹಳ್ಳಿಮಂಜುನಾಥ್ ಅವರ ಹೊನ್ನಾರ ಕೃತಿಯನ್ನ ಬಿಡುಗಡೆ ಮಾಡಲಿದ್ದು ತಾಲೂಕು ಕ.ಸಾ.ಪ ನಿಕಟ ಪೂರ್ವ ಅಧ್ಯಕ್ಷ ಧನಂಜಯಮೆಂಗಸಂದ್ರ ಅವರು ಹೊನ್ನಾರ ಕೃತಿ ಕುರಿತು ಉಪನ್ಯಾಸ ನೀಡಲಿದ್ದು ಲೇಖಕ ನಾಗತಿಹಳ್ಳಿಮಂಜುನಾಥ್ ಆಶಯ ನುಡಿಗಳನ್ನ ನುಡಿಯಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕ.ಸಾ.ಪ ಮಾಜಿ ಅಧ್ಯಕ್ಷರಾದ ಆರ್. ಮಲ್ಲಿಕಾರ್ಜುನಯ್ಯ, ಜಿಲ್ಲಾ ಕ.ಸಾ.ಪ ಮಾಜಿ ಪ್ರಧಾನ ಕಾರ್ಯದರ್ಶಿ ಹುರುಳಿಎಂ.ಬಸವರಾಜ್, ತಾಲೂಕು ಕ.ಸಾ.ಪ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಮತ್ತೋಡು ಹೋಬಳಿ ಕ.ಸಾ.ಪ ಅಧ್ಯಕ್ಷ ರಮೇಶ್, ಹಿರಿಯ ಪತ್ರಕರ್ತ ಎನ್.ಕೆ.ತಿಪೇಸ್ವಾಮಿ (ನಾಗತಿಹಳ್ಳಿ) ತಾಲೂಕು ಕ.ಸಾ.ಪ ಮಾಜಿ ಅಧ್ಯಕ್ಷರುಗಳಾದ ಪಿಎಲ್.ಲೋಕೇಶ್ವರ್, ಹೋ.ಮ.ರಾಜಣ್ಣ, ಎಂ.ಬಿ.ತಿಪ್ಪೇಸ್ವಾಮಿ ಹಾಗೂ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎನ್.ವಿಶ್ವನಾಥ್ ಭಾಗವಹಿಸಲಿದ್ದು ನಂತರ ನಡೆಯಲಿರುವ ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಹಾಗೂ ಕವಿ ಬಾ.ಮೈಲಾರಪ್ಪ, ಮಾಲತೇಶಅರಸು, ಲಕ್ಷ್ಮೀಸಾಗರ್ (ಲವಕುಮಾರ್) ಕೆ.ಕೆ.ಹಳ್ಳಿ, ಆರ್. ಜಗನ್ನಾಥ್‌ಚಿತ್ರದುರ್ಗ, ಕುಮಾರಿ ಎಂ.ಆರ್.ನಳಿನ, ಭಾಗ್ಯ, ಯೋಗಾನಂದಮೆಂಗಸಂದ್ರ, ಮುರುಳಿ(ಬೆಳಕುಪ್ರಿಯ) ಸೌಮ್ಯಕುಮಾರಿ ಹಾಗು ಗೀತಾಭರಮಸಾಗರ ಮತ್ತಿತರರು ಕವನ ಮಾಡಲಿದ್ದು ಹೊನ್ನೇನಹಳ್ಳಿ ಜೆ.ಇ.ಮಂಜುನಾಥ್ ಕವಿಗೋಷ್ಠಿಯ ನಿರ್ವಹಣೆ ನಡೆಸಿಕೊಡಲಿದ್ದಾರೆ ಎಂದು ತಿಳಿಸಿದರು. ಪತ್ರಿಕಾ ಗೋಷ್ಠಿಯಲ್ಲಿ ಸಜ್ಞಾನ ಎಜುಕೇಷನಲ್ ಟ್ರಸ್ಟ್ (ರಿ) ಸನ್‌ಶೈನ್ ಪಬ್ಲಿಕ್ ಸ್ಕೂಲ್ ಅಧ್ಯಕ್ಷ ಸಫಾರಿ ಎಂ.ಶಿವಲಿಂಗಪ್ಪ ಹಾಗೂ ಮಾಜಿ.ಕ.ಸಾಪ ತಾಲೂಕು ಅಧ್ಯಕ್ಷ ಹೋ.ಮ. ರಾಜಣ್ಣ ಉಪಸ್ಥಿತರಿದ್ದರು.

### ಕೃಷಿ ಸಚಿವರ ಜಿಲ್ಲಾ ಪ್ರವಾಸ

» ದಾವಣಗೆರೆ

ಕೃಷಿಸಚಿವರಾದಎನ್.ಚಲುವರಾಯಸ್ವಾಮಿಅವರು ನ.22 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ನ.22 ರಂದು ಬೆಳಿಗ್ಗೆ.10 ಗಂಟೆಗೆ ಜಗಳೂರು ತಾಲ್ಲೂಕಿನ ಸೊಕ್ಕೆ ಗ್ರಾಮದಲ್ಲಿ ಶ್ರೀ ಶಿರಡಿ ಸಾಯಿ ಬಾಬಾ ದೇವಸ್ಥಾನದ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 1.30 ರಿಂದ ಜಗಳೂರು ಮತ್ತು ದಾವಣಗೆರೆ ತಾಲ್ಲೂಕುಗಳ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡುವರು. ಮಧ್ಯಾಹ್ನ 3.30ಕ್ಕೆ ದಾವಣಗೆರೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಾವಣಗೆರೆ, ಹಾವೇರಿ ಮತ್ತು ಚಿತ್ರದುರ್ಗ ಜಿಲ್ಲೆ ಕೃಷಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಸಂಜೆ 4.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸುವರು. ಸಂ.5 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ಹಾಗೂ ಕಾರ್ಯಕರ್ತರ ಅಹವಾಲುಗಳನ್ನು ಆಲಿಸುವುದು.

# ತಾಲ್ಲೂಕು ಶಿಕ್ಷಕರ ಸಹಪಠ್ಯ ಚಟುವಟಿಕೆ ಸ್ಪರ್ಧೆಗೆ ಚಾಲನೆ

## ಶಿಕ್ಷಕರು ಹೆಚ್ಚು ಮಾಹಿತಿ ಪಡೆದು ಪರಿಪೂರ್ಣತೆ ಹೊಂದಲು ಇಂತಹ ಕಾರ್ಯಕ್ರಮ ಸಹಕಾರಿ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ತಾಲ್ಲೂಕಿನ ಪ್ರೌಢ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣನಿಧಿ ವತಿಯಿಂದ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಯನ್ನು ಹಮ್ಮಿಕೊಳ್ಳುವ ಮೂಲಕ ಶಿಕ್ಷಕ ಮನೋವಿಕಾಸಕ್ಕೆ ಇಲಾಖೆ ಅವಕಾಶ ಮಾಡಿಕೊಟ್ಟಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ನಗರದ ವಿಶ್ವಭಾರತಿ ಪ್ರೌಢಶಾಲೆಯಲ್ಲಿ ಪ್ರಸ್ತುತ ವರ್ಷ ಶಾಲಾ ಶಿಕ್ಷಕ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದರು.

ಈಗಾಗಲೇ ಇಲಾಖೆವತಿಯಿಂದ ಎಲ್ಲಾ ಪ್ರೌಢ ಮತ್ತು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಕಾರ್ಯಕ್ರಮದ ಮಹತ್ವ ಹಾಗೂ ಚಟುವಟಿಕೆ ಕುರಿತು ಮಾಹಿತಿ ನೀಡಲಾಗಿದೆ. ಶಿಕ್ಷಕರು ಇಡೀ ವರ್ಷ ವಿದ್ಯಾರ್ಥಿಗಳ ಬೋಧನಾ ಕಾರ್ಯದಲ್ಲಿ ತೊಡಗಿಕೊಂಡು ತಮ್ಮ ವೃತ್ತಿಯ ಪಾವಿತ್ರತೆಯನ್ನು ಕಾಪಾಡಿಕೊಂಡು ಬರುವ ಸಂದರ್ಭದಲ್ಲೂ ಅವರಲ್ಲೂ ಸಹ ಪಠ್ಯೇತರ ಚಟುವಟಿಕೆಗಳ ಬಗ್ಗೆ ಆಸಕ್ತಿ ಹಾಗೂ ಹೆಚ್ಚು ಆತ್ಮವಿಶ್ವಾಸ ಮೂಡಿಸಲು ಇಂತಹ ಚಟುವಟಿಕೆಗಳ ಅಗತ್ಯವಿದೆ.

ನನ್ನ ವಿಶೇಷ ಮನವಿ ಎಂದರೆ ಇಂತಹ ಚಟುವಟಿಕೆಗಳಲ್ಲಿ ಎಲ್ಲಾ ಶಿಕ್ಷಕರು ಪಾಲ್ಗೊಳ್ಳುವಂತಾಗಬೇಕು. ಸ್ಪರ್ಧಾಳುಗಳ ಸಂಖ್ಯೆಹೆಚ್ಚಿದಂತೆ ಸ್ಪರ್ಧೆಗೆ ವಿಶೇಷ ಮೌಲ್ಯ ಉಂಟಾಗುತ್ತದೆ. ಸಹ ಪಠ್ಯ ಚಟುವಟಿಕೆಗಳು ನಿಮ್ಮ ವೃತ್ತಿ ಬದುಕಿಗೆ ಬಲವಾದ ಅಡಿಪಾಯ




ಹಾಕುವಲ್ಲಿ ಯಶಸ್ವಿಯಾಗಲಿವೆ ಎಂದರು.

ಪ್ರೌಢಶಾಲಾ ಸಹಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷಬಿ.ರಾಜಕುಮಾರ್ ಮಾತನಾಡಿ, ಪ್ರತಿವರ್ಷ ಇಂತಹ ಕಾರ್ಯಕ್ರಮಗಳಿಂದ ಶಿಕ್ಷಕರು ತಮ್ಮ ಬೋಧನೆಯಲ್ಲಿ ಮಾಡಬಹುದಾದ ಸಣ್ಣಪುಟ್ಟ ದೋಷಗಳನ್ನುತಿದ್ದುಪಡಿಮಾಡಿಕೊಳ್ಳಲು ಅವಕಾಶವಾಗಲಿದೆ. ಒಬ್ಬ ಶಿಕ್ಷಕ ತನ್ನ ವಿಷಯದ ಬಗ್ಗೆ ಬೋಧನೆ ಮಾಡುವಾಗ ಕೇವಲ ತಿಳಿದಷ್ಟು ವಿಷಯವನ್ನು ಮಾತ್ರ ಹೇಳಲು ಸಾಧ್ಯವಾಗುತ್ತದೆ. ಆಧರೆ, ಎಲ್ಲರೂ ಸೇರಿದಾಗ ಅವರಿಂದ ಬರುವ ವಿಭಿನ್ನ ಅಭಿಪ್ರಾಯ ವಿಷಯಗಳ ವಿಂಗಡಣೆ, ಪ್ರಸ್ತುತ ಪಡಿಸುವ ಮಾದರಿ ಎಲ್ಲರಿಗೂ ಸಂತೃಪ್ತಿ ಉಂಟು ಮಾಡಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವಭಾರತಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಜಿ.ಟಿ.ವೀರಭದ್ರಸ್ವಾಮಿ ಮಾತನಾಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಈಗಾಗಲೇ ಕಾರ್ಯಕ್ರಮದ ರೂಪರೇಷೆ, ಸಾಧಕಬಾಧಕಗಳ ಬಗ್ಗೆ ಮನಮುಟ್ಟುವಂತೆ ಹೇಳಿದ್ದಾರೆ. ಅವರಲ್ಲಿ ಅಡಗಿರುವ ಜ್ಞಾನ, ಬುದ್ದಿಕೌಶಲ್ಯವನ್ನು ಮಾತುಗಳ ಮೂಲಕ ಶಿಕ್ಷಕರಿಗೆ ತಿಳಿಸಿದ್ದಾರೆ. ಕಳೆದ ಸುಮಾರು 25 ವರ್ಷಗಳಿಂದ ಶಿಕ್ಷಕ ವೃತ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನನಗೆ ಇಂತಹ ಚಟುವಟಿಕೆಯಿಂದ ಹೆಚ್ಚು ಕಲಿಯುವಂತಾಗಿತು. ನಾನು ಕಲಿತದ್ದನ್ನು ಇನ್ನೊಬ್ಬರಿಗೆ ಇನ್ನೊಬ್ಬರು ಕಲಿತಿದ್ದು ನನಗೆ ಸುಲಭವಾಗಿ ಅರ್ಥವಾಗಲಿದೆ. ಇದು ಶಿಕ್ಷಕರ ಸ್ಪೂರ್ತಿ ಹೆಚ್ಚಿಸಲಿದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹಲಿಂಗಪ್ಪ, ಡಿ.ಟಿ.ಶ್ರೀನಿವಾಸ್, ಈರಣ್ಣ, ಗಿರೀಶ್, ಮಾರುತಿಭಂಡಾರಿ ಮುಂತಾದವರು ಉಪಸ್ಥಿತರಿದ್ದರು.

# ಅಂದ ಮಕ್ಕಳಿಗೆ ಪೀಠೋಪಕರಣ ಹಂಚುವ ಮೂಲಕ ಸರಳ ಹುಟ್ಟುಹಬ್ಬ ಆಚರಣೆ: ಸಿ.ಟಿ.ವೀರೇಶ್



» ಚಳ್ಳಕೆರೆ

ಖಾಸಗಿ ವಿದ್ಯಾಸಂಸ್ಥೆಯ ಅಧ್ಯಕ್ಷ ಹಾಗೂ ವಾಲ್ಮೀಕಿ ಸಮುದಾಯದ ಯುವ ಮುಖಂಡ ಎಸ್.ಸಂದೀಪ್‌ಸೂರ್ಯರವರ ಜನ್ಮದಿನವನ್ನು ಅವರ ಅಭಿಮಾನಿ ಬಳಗ ನಗರ ಸಾರ್ವಜನಿಕ ಆಸ್ಪತ್ರೆ ಹಾಗೂ ಬೆಳಕು ಅಂದರ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ, ಹಣ್ಣು, ಸಿಹಿ ವಿತರಣೆ, ರಕ್ತದಾನ ಮಾಡುವ ಮೂಲಕ ಸರಳವಾಗಿ ಆಚರಿಸಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ರಾಜ್ಯ ಸರ್ಕಾರಿ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್, ಇಂತಹ ಜನ್ಮದಿನಗಳು ವಿಶೇಷ ಸಂದರ್ಭದಲ್ಲಿ ಬಡ ವಿದ್ಯಾರ್ಥಿಗಳಿಗೆ ಪುಸ್ತಕ, ಪೆನ್ನು, ಆಸ್ಪತ್ರೆಯ ರೋಗಿಗಳಿಗೆ ಬ್ರೆಡ್, ಹಣ್ಣು, ಹಾಲು ವಿತರಿಸುವ ಮೂಲಕ ಅರ್ಥಗರ್ಭಿತವಾಗಿ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ರೋಗಿಗಳ ಜೀವ ಸಂರಕ್ಷಣೆಗೆ ಅವಶ್ಯಕವಾಗಿರುವ ರಕ್ತದಾನ ಶಿಬಿರವನ್ನು ಸಹ ಹಮ್ಮಿಕೊಳ್ಳಲಾಗಿದೆ. ಇಂತಹ ಜನರ ಕಾರ್ಯಕ್ರಮಗಳ ಆಚರಣೆ ಮೂಲಕ ಈ ಹುಟ್ಟುಹಬ್ಬ ಹೆಚ್ಚು ಅರ್ಥಪೂರ್ಣವಾಗಿದೆ ಎಂದರು.

ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಜಿಲ್ಲಾಧ್ಯಕ್ಷ ಬಿ.ಸುರೇಶ್ ಮಾತನಾಡಿ, ಪ್ರತಿವರ್ಷವೂ ನಾವು ಹುಟ್ಟುಹಬ್ಬ ಆಚರಣೆ ಮಾಡಿಕೊಳ್ಳುವುದು ವಾಡಿಕೆ. ಆದರೆ, ಈ ಆಚರಣೆ ಉತ್ತಮ ಸಾರ್ಥಕತೆ ಕಾಣಬೇಕಾದರೆ ಇಂತಹ ಕಾರ್ಯಕ್ರಮ ನಡೆಸಬೇಕು. ಹುಟ್ಟುಹಬ್ಬದಂದು ಕೇವಲ ಹಿಸಿ ತಿಂದು ಸಂತಸ ಪಟ್ಟರೆ ಸಾಲದು ಬೇರೆಯವರಿಗೂ ಸಹ ನಾವು ನೆರವು ನೀಡಿದಲ್ಲಿ ಅದರ ಸಾರ್ಥಕತೆಗೆ ಇನ್ನೂ ಹೆಚ್ಚಿನ ಮೌಲ್ಯ ಉಂಟಾಗುತ್ತದೆ ಎಂದರು.

ವೆಂಕಟೇಶ್ವರ ನಗರದ ಬೆಳಕು ಅಂದರ ಶಾಲಾ ಮಕ್ಕಳಿಗೆ ಅವಶ್ಯವಿರುವ ಸುಮಾರು 40ಕ್ಕೂ ಹೆಚ್ಚು ಕುರ್ಚಿಗಳನ್ನು ವಿತರಣೆ ಮಾಡಲಾಗಿತು. ಶಾಲಾ ಆಡಳಿತ ಮಂಡಳಿ ಮಕ್ಕಳಿಗೆ ಉಪಯುಕ್ತವಾದ ಹಸನದ ವ್ಯವಸ್ಥೆ ಒದಗಿಸಿದಕ್ಕಾಗಿ ಧನ್ಯವಾದ ಅರ್ಪಿಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ಮ್ಯಾಟ್ರನ್ ಮಂಜುಳಾ, ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ತಾಲ್ಲೂಕು ಅಧ್ಯಕ್ಷ ಮಹಂತಣ್ಣ, ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಎಚ್.ಒ.ರಾಜಣ್ಣ, ನಾಗರಾಜು, ಎಸಿಎಫ್‌ಶಿವರಾಜು, ಪ್ರಸನ್ನಕುಮಾರ್, ಎನ್.ರಘು, ನವೀನ್‌ಕುಮಾರ್, ದರ್ಶನ್,ಸೋಮಶೇಖರ್,ತಿಪ್ಪೇರುದ್ರಪ್ಪ,ಕೆ.ರವೀಂದ್ರ,ಜೆ.ಮಂಜುನಾಥ, ಸಣ್ಣಪಾಪಣ್ಣ ಮುಂತಾದವರು ಉಪಸ್ಥಿತರಿದ್ದರು.

# ತೋಟಗಾರಿಕೆ ಬೆಳೆ ಹೆಚ್ಚು ಬೆಳೆದು ಲಾಭದತ್ತ ಮುನ್ನಡೆಯಿರಿ

» ಚಳ್ಳಕೆರೆ

ತೋಟಗಾರಿಕೆ ಇಲಾಖೆ ರಾಜ್ಯದಲ್ಲಿ ವಾಣಿಜ್ಯೋದ್ಯಮದ ಬೆಳವಣಿಗೆಯೂ ಸೇರಿದಂತೆ ರೈತರ ಬದುಕನ್ನು ಹಸನು ಮಾಡಲು ಅನೇಕ ಯೋಜನೆಗಳನ್ನು ರೂಪಿಸಿದೆ. ರೈತರು ಹಾಗೂ ವಾಣಿಜ್ಯೋದ್ಯಮಿಗಳು ಇಂತಹ ಯೋಜನೆಗಳ ಬಗ್ಗೆ ಸೂಕ್ತ ಮಾಹಿತಿ ಪಡೆದು ಯೋಜನೆಗಳನ್ನು ಬಳಸಿಕೊಂಡು ಉತ್ತಮ ಬದುಕು ಕಟ್ಟಿಕೊಳ್ಳಬೇಕೆಂದು ತೋಟಗಾರಿಕೆ, ರೇಷ್ಮೆ ಇಲಾಖೆ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್ ತಿಳಿಸಿದರು.

ಅವರು, ತಾಲ್ಲೂಕಿನ ಸಿದ್ದಾಪುರ ಗ್ರಾಮದಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಸುಮಾರು 8 ಕೋಟಿ ವೆಚ್ಚದಲ್ಲಿ ಉದ್ಯಮಿ ವೇಣುಗೋಪಾಲ್ ನಿರ್ಮಿಸಿರುವ ಅಮೃತ ಸಾಯಿ ಕೋಲ್ಡ್ ಸ್ಟೋರೇಜ್ ಮತ್ತು ಲಕ್ಷ್ಮೀಪುರ ಗ್ರಾಮದ ರೈತ ಓಬಣ್ಣ ನಿರ್ಮಿಸಿರುವ ಈರುಳ್ಳಿ ಸಂಗ್ರಹ ಘಟಕ ಮತ್ತು ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಕಾಟನಾಯಕನಹಳ್ಳಿ ರೈತ ಶಿವಕುಮಾರರೆಡ್ಡಿ ನಿರ್ಮಿಸಿರುವ ಕೃಷಿ ಹೊಂಡವನ್ನು ವೀಕ್ಷಿಸಿ ಮಾತನಾಡಿದರು. ರೈತರು ಹಾಗೂ ವಾಣಿಜ್ಯೋದ್ಯಮಿಗಳು ತೋಟಗಾರಿಕೆ ಬೆಳೆಗಳನ್ನು ಸಂರಕ್ಷಿಸಿ ಮಾರಾಟ ಮಾಡಿದಲ್ಲಿ ರೈತನಿಗೆ ಹೆಚ್ಚು ಲಾಭವಾಗುತ್ತದೆ. ತೋಟಗಾರಿಕೆ ಇಲಾಖೆ ವತಿಯಿಂದ ಈ ಬಾರಿ ಸಾರ್ವಜನಿಕವಾಗಿ ವಾಣಿಜ್ಯೋದ್ಯಮಿಗಳಿಗೆ ನೀಡುವ ಸಹಾಯಧನವನ್ನು ಹೆಚ್ಚಿಸಲಾಗಿದೆ. ಅದೇ ರೀತಿ ಕೃಷಿಕರು ನಿರ್ಮಿಸು ಕೃಷಿ ಹೊಂಡಕ್ಕೂ ಸರ್ಕಾರ ಸಹಾಯಧನ ನೀಡಲಿದೆ,

## ಪ್ರಮುಖ ಸುದ್ದಿ

### ತೆಲಂಗಾಣ ಚುನಾವಣೆಯಲ್ಲಿ ಶಾಸಕ ರಘುಮೂರ್ತಿ ಭರ್ಜರಿ ಪ್ರಚಾರ

# ಬಡವರ ಬದುಕಿನ ಸುಭದ್ರತೆಗೆ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ

» ಚಳ್ಳಕೆರೆ

ಕಳೆದ ಆರು ತಿಂಗಳಿನಿಂದ ಕರ್ನಾಟಕದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ನೇತೃತ್ವದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರ ಉತ್ತಮ ಆಡಳಿತದಿಂದ ಕರ್ನಾಟಕ ರಾಜ್ಯ ಪ್ರಗತಿಯತ್ತ ಹೆಜ್ಜೆ ಇಡುತ್ತಿದೆ. ದೇಶದಲ್ಲಿ ಅತಿಹೆಚ್ಚಿನ ಪ್ರಗತಿಯಿಂದ ಮುನ್ನುತ್ತಿರುವ ರಾಜ್ಯ ಕರ್ನಾಟಕ. ತೆಲಂಗಾಣವೂ ಸಹ ಕರ್ನಾಟಕದಂತಾಗಬೇಕಾದರೆ ತಾವೆಲ್ಲರೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದು ರಾಜ್ಯದ ಉನ್ನತ ಶಿಕ್ಷಣ ಸಚಿವ ಹಾಗೂ ತೆಲಂಗಾಣ ಚುನಾವಣಾ ಉಸ್ತುವಾರಿ ಎಂ.ಸಿ.ಸುಧಾಕರ ತಿಳಿಸಿದರು.

ಅವರು, ತೆಲಂಗಾಣದ ಯರವಲಿ ಮಂಡಲದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ.ಎಸ್.ಎ.ಸಂಪತ್‌ಕುಮಾರ್ ಪರವಾಗಿ ಚುನಾವಣಾ ಪ್ರಚಾರ ಕಾರ್ಯದಲ್ಲಿ ಜನತೆಯನ್ನುಉದ್ದೇಶಿಸಿ ಮಾತನಾಡಿದರು. ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ



ಅಧಿಕಾರ ನಡೆಸುವ ಮುನ್ನ ಬಿಜೆಪಿ ಅಧಿಕಾರದಲ್ಲಿದ್ದು, ಭ್ರಷ್ಟಾಚಾರ ಹಾಗೂ ಮಿತಿಮೀರಿದ ದುರಾಡಳಿತದಿಂದ ಅಧಿಕಾರ ಕಳೆದುಕೊಂಡಿತು. ತೆಲಂಗಾಣದ ಜನರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವರು ಎಂಬ ವಿಶ್ವಾಸ ನನಗಿದೆ ಎಂದರು.

ಚಳ್ಳಕೆರೆ ಕ್ಷೇತ್ರದ ಶಾಸಕ ಹಾಗೂ ತೆಲಂಗಾಣ ಚುನಾವಣಾ ಉಸ್ತುವಾರಿ ಟಿ.ರಘುಮೂರ್ತಿ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತಕ್ಕೆ ಬಂದು ಕೇವಲ ಆರು ತಿಂಗಳಾಗಿದೆ. ಬಡ ಜನರ ಕಲ್ಯಾಣಕ್ಕಾಗಿ ನಿಯೋಜಿಸಿದ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿದೆ. ವಿಶೇಷವಾಗಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, ಪ್ರತಿಕುಟುಂಬದ ಯಜಮಾನಿಗೆ ಮಾಸಿಕ ಎರಡು ಸಾವಿರ ವೇತನ, ಪಡಿತರ ವಿತರಣೆ ಬದಲು ಹಣ, ರೈತರಿಗೆ ನೆರವಾಗಲು ವಿಶೇಷ ಯೋಜನೆ, ಬಡ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಹಾಗೂ ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಕರ್ನಾಟಕದಲ್ಲಿ ಅತಿಕಡುಬಡವರ ಜೀವನವನ್ನು ಸುಧಾರಣೆ ಮಾಡುವಲ್ಲಿ ಸರ್ಕಾರ ಯಶಸ್ವಿ ಹೆಜ್ಜೆ ಇಟ್ಟಿದೆ. ಈ ಬಾರಿಯ ಚುನಾವಣೆಯಲ್ಲಿ ಅಭ್ಯರ್ಥಿ ಡಾ.ಎಸ್.ಎ.ಸಂಪತ್‌ಕುಮಾರ್ ರವರನ್ನು ಗೆಲ್ಲಿಸಿ ನೀವು ಸಹ ಉತ್ತಮ ಆಡಳಿತ ಪಡೆಯಿರಿ ಎಂದು ಮನವಿ ಮಾಡಿದರು.

ಮಂಡಲಾಧ್ಯಕ್ಷ ವೆಂಕಟೇಶ್‌ಯಾದವ್, ಮುಖಂಡರಾದ ನಾರಾಯಣರೆಡ್ಡಿ, ಶ್ರೀನಿವಾಸ್, ರವಿ ಮುಂತಾದವರು ಉಪಸ್ಥಿತರಿದ್ದರು.

# ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಶ್ರಮಿಸಿ, ಮಕ್ಕಳನ್ನು ಮುಖ್ಯವಾಹಿನಿಗೆ ತನ್ನಿ: ಕುಮಾರಸ್ವಾಮಿ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಶ್ರಮಿಸಿ, ಬಾಲಕಾರ್ಮಿಕ ಪದ್ಧತಿಯಿಂದ ಹೊರಬಂದ ಎಲ್ಲ ಮಕ್ಕಳಿಗೂ ಶಿಕ್ಷಣ ದೊರೆಯುವಂತೆ ಮಾಡುವುದರ ಮೂಲಕ ಮುಖ್ಯವಾಹಿನಿಗೆ ತರಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾಮಟ್ಟದ ಕಾರ್ಯಪಡೆ ಹಾಗೂ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೀತಪದ್ಧತಿ ಹೇಗೆ ಮಾರಕ ಶಾಪ ಇದ್ದಂತೆ ಅದೇ ರೀತಿ ಬಾಲಕಾರ್ಮಿಕ ಪದ್ಧತಿಯೂ ಶಾಪ ಇದ್ದಂತೆ. ಹಾಗಾಗಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕರನ್ನು ಪತ್ತೆ ಹಚ್ಚಲು ಪರಿಣಾಮಕಾರಿಯಾಗಿ ದಾಳಿ ನಡೆಸಿ, ತಪಾಸಣೆ ಮಾಡಬೇಕು. ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಆಗಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ ಅವರು, ಬಾಲಕಾರ್ಮಿಕರನ್ನು ನೇಮಿಸಿಕೊಂಡ ಮಾಲೀಕರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕೈಗೊಳ್ಳಬೇಕು ಎಂದು ಹೇಳಿದರು.



ಇಟ್ಟಿಗೆಭಟ್ಟಿ, ಗ್ಯಾರೇಜ್, ಬಾರ್ ಅಂಡ್ ರೆಸ್ಟೋರೆಂಟ್‌ಗಳಲ್ಲಿ ಬಾಲಕಾರ್ಮಿಕರು ಕಾರ್ಯನಿರ್ವಹಿಸುವ ಸಂಭವ ಹೆಚ್ಚಾಗಿರುವುದರಿಂದ ಕಾರ್ಮಿಕರು ನಿರೀಕ್ಷಕರು ಹಾಗೂ ತಹಶೀಲ್ದಾರ್‌ಗಳು ನಿಯಮಿತವಾಗಿ ದಾಳಿ ನಡೆಸಿ ತಪಾಸಣೆ ಮಾಡಬೇಕು. ಇದರಿಂದ ಜಾಗೃತಿ ಮೂಡಲಿದೆ. ಇದರ ಜೊತೆಗೆ ತಾಲ್ಲೂಕುವಾರು ಶಾಲಾ ಬಿಟ್ಟ ಮಕ್ಕಳ ಮಾಹಿತಿಯನ್ನೂ ಪಡೆದು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಕೆಲಸ ಮಾಡಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಒಟ್ಟು 440 ಮಕ್ಕಳು ಶಾಲೆಯಿಂದ ಹೊರಗುಳಿದಿದ್ದು, ಶಾಲೆಬಿಟ್ಟ ಮಕ್ಕಳನ್ನು ಮುಖ್ಯವಾಹಿನಿಗೆ ಕರೆತರಲು ಕ್ರಮವಹಿಸಲಾಗುತ್ತಿದೆ ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಬಾಲ್ಯ ಮತ್ತು ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಮಕ್ಕಳಲ್ಲಿ ಅರಿವು ಮೂಡಿಸಲು ಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ, ಚರ್ಚಾಸ್ಪರ್ಧೆ ನಡೆಸಬೇಕು. ಇದರ ಜೊತೆಗೆ ಜನಸಂದಣಿ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಜಾಥಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜಾಗೃತಿ ಮೂಡಿಸಬೇಕು ಎಂದರು.

ಕಾರ್ಮಿಕ ಅಧಿಕಾರಿ ಇಬ್ರಾಹಿಂ ಮಾತನಾಡಿ, ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕರನ್ನು ಪತ್ತೆ ಹಚ್ಚಲು ತಪಾಸಣೆ ಹಾಗೂ ಪುನರ್ವಸತಿ ಕಲ್ಪಿಸುವ ಸಲುವಾಗಿ ಈಗಾಗಲೇ ಜಿಲ್ಲಾಮಟ್ಟದ ಕಾರ್ಯಪಡೆ ರಚಿಸಲಾಗಿದೆ. ಪ್ರತಿ ಮಾಹೆಯಲ್ಲಿ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕರನ್ನು ಪತ್ತೆ ಹಚ್ಚಿ ತಪಾಸಣೆ ಮಾಡಿದ ವರದಿಯನ್ನು ಕಾರ್ಮಿಕ ನಿರೀಕ್ಷಕರು ಕಾಲಕಾಲಕ್ಕೆ ವರದಿ ಸಲ್ಲಿಸಬೇಕು ಎಂದರು.

ಜಿಲ್ಲೆಯಾದ್ಯಂತ 1986ರ ಬಾಲಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಅಡಿಯಲ್ಲಿ ಕಾರ್ಮಿಕ ನಿರೀಕ್ಷಕರು 2023ರ ಏಪ್ರಿಲ್ 1 ರಿಂದ ಅಕ್ಟೋಬರ್ 31 ರವರೆಗೆ ಒಟ್ಟು 294 ತಪಾಸಣೆ ಮಾಡಲಾಗಿದ್ದು, 9 ಬಾಲಕಾರ್ಮಿಕರನ್ನು ಪತ್ತೆ ಹಚ್ಚಿ, ಪುನರ್ ವಸತಿಗೊಳಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಕಾನೂನು ಸೇವಾ ಪ್ರಾಧಿಕಾರ ವತಿಯಿಂದ ಪಾನ್-ಇಂಡಿಯಾ ರೆಸ್ಕ್ಯೂ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೈನ್ ಆಫ್ ಚೈಲ್ಡ್ ಅಂಡ್ ಅಡೋಲೆಸೆಂಟ್ ಲೇಬರ್ ಫಾರ್ಮ್ ಅನ್ನು ನವೆಂಬರ್ 20 ರಿಂದ ಡಿಸೆಂಬರ್ 10 ರವರೆಗೆ 20 ದಿನಗಳ ಕಾಲ ನಿರಂತರವಾಗಿ ಜಿಲ್ಲೆಯಲ್ಲಿ ಕೆಲಸದಲ್ಲಿ ತೊಡಗಿರುವ ಬಾಲ್ಯ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಬೇಕು. ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿಕೊಡುವ ಉದ್ದೇಶದಿಂದ ರಕ್ಷಣಾ ಕಾರ್ಯಚರಣೆ ನಡೆಸಬೇಕಿದೆ ಎಂದರು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಜಿಲ್ಲಾಮಟ್ಟದ ಕಾರ್ಯಪಡೆಯ ತಂಡವು ಕಾರ್ಯಸೂಚಿ ಅನ್ವಯ 20 ದಿನಗಳ ಕಾಲ ನಿರಂತವಾಗಿ ಜಿಲ್ಲೆಯಲ್ಲಿ ಕೆಲಸದಲ್ಲಿ ತೊಡಗಿರುವ ಬಾಲ್ಯ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಲು ಕಾರ್ಯಪ್ರವೃತ್ತರಾಗಬೇಕು ಅಪರ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಕಾರ್ಮಿಕ ನಿರೀಕ್ಷಕ ರಾಜಣ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಅತ್ತಿಮಗ್ಗೆ ಗ್ರಾಮದಲ್ಲಿ ಜನತಾದರ್ಶನ ಕಾರ್ಯಕ್ರಮ

### ಭದ್ರಾದಿಂದ ಶುದ್ಧ ಕುಡಿಯುವ ನೀರು ಹಾಗೂ ಕೆರೆಗಳಿಗೆ ನೀರು ಹರಿಸುವ ಯೋಜನೆಗೆ ವೇಗ

» **ಚಿತ್ರದುರ್ಗ**

ಭದ್ರಾಜಲಾಶಯದಿಂದ ಹೊಸದುರ್ಗ ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ 400 ಕೋಟಿ ರೂ. ವೆಚ್ಚದಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಯಡಿ ಕೆರೆಗಳಿಗೆ ನೀರು ಹರಿಸುವ ಯೋಜನೆಗೆ ವೇಗ ನೀಡಿ, ಕಾರ್ಯಗತಗೊಳಿಸಲಾಗುವುದು ಎಂದು ಹೊಸದುರ್ಗ ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿದರು.

ಮಂಗಳವಾರ ಹೊಸದುರ್ಗ ತಾಲ್ಲೂಕಿನ ಅತ್ತಿಮಗ್ಗೆ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಜನರ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ಭದ್ರಾ ಯೋಜನೆ ಅನುಷ್ಠಾನದಿಂದ ಹೊಸದುರ್ಗ ತಾಲ್ಲೂಕಿನ 1.33 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರು ಉಣಿಸಲಾಗುವುದು. ರೂ.400 ಕೋಟಿ ವೆಚ್ಚದಲ್ಲಿ ಭದ್ರಾ ಜಲಾಶಯದಿಂದ ಬಹುಗ್ರಾಮ ಯೋಜನೆಯಡಿ ಶುದ್ಧ ಕುಡಿಯುವ ನೀರು ಸರಬರಾಜು ಯೋಜನೆ ತ್ವರಿತವಾಗಿ ನಡೆಯುತ್ತಿದೆ. ಮಾರ್ಚ್ ವೇಳೆಗೆ ಮೊದಲ ಹಂತದಲ್ಲಿ ಹೊಸದುರ್ಗ ನಗರ, ಕಸಬಾ ಹಾಗೂ ಮಾಡದಕರೆ ಹೋಬಳಿ ಅರ್ಧ ಭಾಗದ ಹಳ್ಳಿಗಳಿಗೂ ಶುದ್ಧ ಕುಡಿಯುವ ನೀರು ನೀಡಲಾಗುವುದು. ಮುಂದಿನ ವರ್ಷದ ವೇಳೆಗೆ ಉಳಿದ ಭಾಗಗಳಿಗೂ ಶುದ್ಧ ಕುಡಿಯುವ ನೀರು ನೀಡಲಾಗುವುದು ಎಂದರು.



ಬಗರ್ ಹುಕುಂ ನಡಿ ಭೂಮಿ ಸಾಗುವಳಿ ದಾಖಲೆ ನೀಡುವಂತೆ ಈ ಭಾಗದ ಬಹಳಷ್ಟು ರೈತರು ಅರ್ಜಿ ಸಲ್ಲಿಸುತ್ತಿರುವುದು ಗಮನಕ್ಕೆ ಬಂದಿದೆ. ಬಗರ್‌ಹುಕುಂ ಸಾಗುವಳಿ ಸಮಿತಿ ರಚನೆಗೆ ಈಗಾಗಲೆ ಸರ್ಕಾರಕ್ಕೆ ಪತ್ರ ಪ್ರಸ್ತಾವನೆ ಸಲ್ಲಿಸಲಾಗಿದೆ. ಶೀಘ್ರದಲ್ಲೇ ಸರ್ಕಾರ ಸಮಿತಿ ರಚನೆಗೆ ಅನುಮತಿ ನೀಡಲಿದೆ. ಫಾರಂ 54 ಹಾಗೂ 57 ಅಡಿ ಸಾಗುವಳಿ ಜಮೀನು ಮಂಜೂರಾತಿಗೆ ಸಲ್ಲಿಸಿದ ಅರ್ಜಿಗಳ ಆಧಾರದಲ್ಲಿ ಕಂದಾಯ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳು ಜಮೀನಗಳ ಜಿ.ಪಿ.ಎಸ್ ಸರ್ವೆ ಮಾಡಿ ಸಾಗುವಳಿದಾರರ ವಿವರ ನಮೂದಿಸುವರು. ಇದನ್ನು ಆಧರಿಸಿ ಬಗರ್ ಹುಕುಂ ಸಮಿತಿ ಸಭೆಯಲ್ಲಿ ರೈತರಿಗೆ ಸಾಗುವಳಿ ಚೀಟಿ ನೀಡಲು ಕ್ರಮ ಕೈಗೊಳ್ಳಲಾಗುವುದು. ವಿ.ವಿ. ಸಾಗರ ಜಲಾಶಯದ ಹಿನ್ನೀರಿನಿಂದ ತೊಂದರೆ ಅನುಭವಿಸುತ್ತಿರುವ ಈ ಭಾಗದ ರೈತರಿಗೇ ಮೊದಲು ಭೂಮಿ ವಿತರಿಸುವ ಕಾರ್ಯಕ್ಕೆ ಚಾಲನೆ ನೀಡಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

ಕಂದಾಯ ಸಚಿವರಾದ ಕೃಷ್ಣ ಭೈರೇಗೌಡವರು ತಾಂತ್ರಿಕ ಸಲಹೆ ಪಡೆದುಕೊಂಡು ಜಮೀನು ಹಂಚಿಕೆಗೆ ಕ್ರಮ ಕೈಗೊಂಡಿದ್ದಾರೆ. ಬಗರ್ ಹುಕುಂ ಅರ್ಜಿಗಳನ್ನು ಗಣಕೀಕರಣ ಮಾಡಿ ನೊಂದಾಯಿಸಲಾಗುವುದು. ಇದರಿಂದ ಅರ್ಜಿಗಳು ಕಳೆದು ಹೋಗುವ ಸಂಭವ ಎದುರಾಗುವುದಿಲ್ಲ. ಬಗರ್ ಹುಕುಂ ಸಮಿತಿಗೆ ಸರ್ಕಾರದಿಂದ ಅನುಮತಿ ಬಂದ ಬಳಿಕ, ತಹಶಿಲ್ದಾರರು ಕಾರ್ಯದರ್ಶಿಯಾಗಲಿದ್ದು ಪ್ರತಿ ವಾರ ತಪ್ಪದೇ ಸಭೆಗಳನ್ನು ನಡೆಸಿ ಅರ್ಜಿಗಳನ್ನು ಪರಿಶೀಲನೆ ಮಾಡಲಾಗುವುದು. ಬಗರ್ ಹುಕುಂ ಸಮಿತಿಗೆ ಸ್ಥಳೀಯ ಶಾಸಕರು ಅಧ್ಯಕ್ಷರಾಗಿದ್ದು ಅನುಮೋದಿಸಿದ ಅರ್ಜಿಗಳಿಗೆ ಬಯೋ ಮೆಟ್ರಿಕ್ ನೀಡಬೇಕಾಗುತ್ತದೆ. ಅರ್ಜಿದಾರರಿಗೆ ಆನ್ ಲೈನ್ ಮೂಲಕವೇ ಸಾಗುವಳಿ ಚೀಟಿ ಲಭಿಸಲಿದೆ. ಫಾರಂ 53 ಅಡಿ ಅರ್ಜಿ ಸಲ್ಲಿಸಿದವರಿಗೆ ಸಾಗುವಳಿ ಚೀಟಿ ನೀಡಲಾಗುವುದು. ಸರ್ಕಾರ ಹಾಗೂ ಹೈಕೋರ್ಟ್ ಆದೇಶಗಳ ಅನುಸಾರ ಫಾರಂ 57 ಅಡಿ ಕ್ರಮಕೈಗೊಳ್ಳಲಾಗುವುದು. ಮಾರ್ಗಸೂಚಿಗಳ ಅನುಸಾರವೇ ಭೂಮಿ ಮುಂಜೂರು ಮಾಡಲಾಗುವುದು. ರೈತರು ಯಾವುದೇ ಕಾರಣಕ್ಕೂ ಮಧ್ಯವರ್ತಿಗಳನ್ನು ನಂಬಿ ಮೋಸ ಹೋಗಬಾರದು. ಮುಂದಿನ ವರ್ಷದ ಮೇ ತಿಂಗಳಿನಲ್ಲಿ ಹೊಸ ಮನೆಗಳಿಗೆ ಅರ್ಜಿ ಕರೆಯಲಾಗುವುದು. ಹೊಸ ಅರ್ಜಿಗಳನ್ನು ಗ್ರಾಮ ಸಭೆಯ ಮುಂದಿರಿಸಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು. ಸದ್ಯ ಈ ಹಿಂದೆ ಮಂಜೂರು ಆಗಿರುವ ಮನೆಗಳಿಗೆ ಸರ್ಕಾರ ಅನುದಾನದ ನೀಡಿದೆ. ಫಲಾನುಭವಿಗಳು ಶೀಘ್ರವಾಗಿ ಮನೆಗಳನ್ನು ನಿರ್ಮಿಸಿಕೊಳ್ಳಬೇಕು ಎಂದರು.

ಜನತಾ ದರ್ಶನದಲ್ಲಿ ಸಲ್ಲಿಸಿದ ಅರ್ಜಿಗಳಿಗೆ 15 ದಿನದಲ್ಲಿ ಮನೆ ಬಾಗಿಲಿಗೆ ಉತ್ತರ ಬರುತ್ತದೆ. ಯಾರೂ ಕೂಡ ಕಚೇರಿಗೆ ಅಲೆದಾಡುವ ಅವಶ್ಯಕತೆ ಇಲ್ಲ. ಆದಿ ಜಾಂಬವ, ಅಂಬೇಡ್ಕರ್, ದೇವರಾಜ ಅರಸು, ಉಪ್ಪಾರ ಸೇರಿದಂತೆ ಎಲ್ಲಾ ನಿಗಮಮಂಡಳಿಗಳಲ್ಲಿ ಸಾಲ ಸೌಲಭ್ಯಕ್ಕೆ ಹಲವು ಜನರು ಅರ್ಜಿ ಸಲ್ಲಿಸಲಾಗಿದೆ. ನಿಗಮಗಳ ಸಾಲ ಮಂಜೂರಾತಿಗೆ ಗುರಿ ನಿಗದಿಯಾಗಿಲ್ಲ. ಗುರಿ ನಿಗದಿಯಾದ ಬಳಿಕ ಜೇಷ್ಠತೆ ಹಾಗೂ ಅರ್ಹತೆ ಆಧರಿಸಿ ಸಾಲ ಮಂಜೂರು ಮಾಡಲಾಗುವುದು. ವಿವಿಧ ನಿಗಮಗಳಡಿ ಸಾಲ ಸೌಲಭ್ಯ, ಗಂಗಾ ಕಲ್ಯಾಣ ಸೇರಿದಂತೆ ಯಾವುದೇ ಯೋಜನೆಗಳಡಿ ಸಾಲ ಸೌಲಭ್ಯ ಹಾಗೂ ಸರ್ಕಾರದ ಸೌಲಭ್ಯಕ್ಕಾಗಿ ಯಾರೂ ಕೂಡ ಮಧ್ಯವರ್ತಿಗಳ ಹಾವಳಿಗೆ ಒಳಗಾಗಿ ಹಣ ಕಳೆದುಕೊಳ್ಳಬೇಡಿ ಎಂದರು.

## ಲೋಕಸಭಾ ಕ್ಷೇತ್ರಕ್ಕೆ ಹೊರಗಿನರಿಗೆ ಬದಲಾಗಿ ಸ್ಥಳೀಯರಿಗೆ ಅವಕಾಶ ಕಲ್ಪಿಸಿ : ಕೆ.ಎಂ.ನಾಗರಾಜು.



» **ಚಳ್ಳಕೆರೆ**

ಚಿತ್ರದುರ್ಗ ಲೋಕಸಭಾ ಕ್ಷೇತ್ರ ನಿರಂತರವಾಗಿ ಬೇರೆ, ಬೇರೆ ಅಭ್ಯರ್ಥಿಗಳ ವಿಜಯಕ್ಕೆ ಕಾರಣವಾಗುತ್ತಿದ್ದು, ಇದರಿಂದ ಸ್ಥಳೀಯ ಸಂಸ್ಥೆಗಳಿಗೆ ಪ್ರತಿನಿಧಿಸುವ, ಸೂಕ್ತ ಅಭ್ಯರ್ಥಿಯ ಕೊರತೆ ಎದುರಾಗಿದೆ. ರಾಜಕೀಯ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿರುವ ಹಾಗೂ ಸ್ಥಳೀಯ ಸಂಸ್ಥೆಗಳನ್ನು ಪಾರ್ಲಿಮೆಂಟ್‌ನಲ್ಲಿ ಅರ್ಥಗರ್ಭಿತವಾಗಿ ಬಿಂಬಿಸುವ ಡಾ.ಜೆ.ಜೆಹಟ್ಟಿ ತಿಪ್ಪೇಸ್ವಾಮಿಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟರೆ ವಕೀಲರು ಅವರಿಗೆ ಸಂಪೂರ್ಣ ಬೆಂಬಲ ನೀಡುತ್ತಾರೆಂದು ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ತಿಳಿಸಿದರು.

ಅವರು, ನ್ಯಾಯಾಲಯದ ಆವರಣದ ವಕೀಲರ ಭವನದಲ್ಲಿ 2024ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ ಬಯಸಿರುವ, ವೃತ್ತಿಯಲ್ಲಿ ವಕೀಲರಾಗಿರುವ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿಯವರ ಉಮೇದುವಾರಿಕೆಯನ್ನು ಬೆಂಬಲಿಸಿ ಮಾತನಾಡಿದರು. ಈಗಾಗಲೇ ಜಿಲ್ಲೆಯಾದ್ಯಂತ ಅವರು ಚುನಾವಣೆಯಲ್ಲಿ ಸ್ಪರ್ಧಿಸಲು ಎಲ್ಲಾ ಸಿದ್ಧತೆ ಮಾಡಿಕೊಂಡಿದ್ದು, ಅವರು ಅಭ್ಯರ್ಥಿಯಾದರೆ ಸಂಪೂರ್ಣ ಬೆಂಬಲವನ್ನು ನೀಡುವ ಭರವಸೆ ನೀಡಿದರು.

ಹಿರಿಯ ವಕೀಲ ಎಂ.ಎಸ್.ಜಗದೀಶ್‌ನಾಯಕ ಮಾತನಾಡಿ, ವಿದ್ಯಾರ್ಥಿದೆಸೆಯಿಂದಲೇ ಹೋರಾಟಗಳ ಮೂಲಕ ತಮ್ಮ ರಾಜಕೀಯ ಬದುಕನ್ನು ಸಮಾಜ ಸೇವೆಗಾಗಿ ಮೀಸಲಿಟ್ಟ ಅತ್ಯಂತಧೀಮಂತ ವ್ಯಕ್ತಿ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ. ಉತ್ತಮ ವ್ಯಕ್ತಿತ್ವ, ವಾಕ್ ಚಾತುರ್ಯ, ಹಿಡಿದ ಕೆಲಸ ಮಾಡುವ ಛಲ ಅವರಲ್ಲಿ ಕರತಗವಾಗಿದೆ ಎಂದರು. ಇಂತಹ ವ್ಯಕ್ತಿ ಸಂಸತ್‌ನಲ್ಲಿ ಕಾರ್ಯನಿರ್ವಹಿಸಿದರೆ ನಮ್ಮ ಜಿಲ್ಲೆ ಹೆಚ್ಚಿನ ಅಭಿವೃದ್ಧಿಯತ್ತ ಸಾಗಲಿದೆ ಎಂದರು. ವಕೀಲ ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ ಮಾತನಾಡಿ, 2008ರ ಲೋಕಸಭಾ ಚುನಾವಣೆಯಲ್ಲಿ ನಾನು ಸ್ಪರ್ಧಿಸಿದ್ದು, ಅತಿಹೆಚ್ಚು ಮತಗಳನ್ನು ಪಡೆದಿದ್ದೆನಾದರೂ ಕೇವಲ ಅಲ್ಪಮತಗಳಿಂದ ಪರಾಭವಗೊಳ್ಳಬೇಯಿತು. 2013 ಮತ್ತು 2019ರ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಅವಕಾಶ ನೀಡಲಿಲ್ಲ. ಆದರೂ ಸಹ ನಾನು ಜನಪರ ಕಾರ್ಯಗಳಲ್ಲಿ ನಿರತನಾಗಿದ್ದೇನೆ.

## ಫಾಸ್ಟ್ ನ್ಯೂಸ್

### ಅವಕಾಶ ಸಿಗುವುದಿಲ್ಲ ಎಂಬ ಕೀಳರಿಮೆಯಿಂದ ಪೋಷಕರು ಮೊದಲು ಹೊರ ಬರಬೇಕು-ಪ್ರದೀಪ್



» **ಹೊಸದುರ್ಗ**

ನಮ್ಮ ಮಕ್ಕಳು ಸರ್ಕಾರಿ ಶಾಲೆಯಲ್ಲಿ ಓದುತ್ತಿದ್ದಾರೆ, ನಮ್ಮ ಮಕ್ಕಳಿಗೆ ಅವಕಾಶ ಸಿಗುವುದಿಲ್ಲ ಎಂಬ ಕೀಳರಿಮೆಯಿಂದ ಪೋಷಕರು ಮೊದಲು ಹೊರ ಬರಬೇಕು ಎಂದು ಸದ್ಗುರು ಆಯುರ್ವೇದ ಸಂಸ್ಥೆಯ ಮುಖ್ಯಸ್ಥ ಡಿಎಸ್ ಪ್ರದೀಪ್ ತಿಳಿಸಿದರು,

ತಾಲೂಕಿನ ಜೋಡಿ ತುಂಬಿನಕೆರೆ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮೂಲಭೂತ ಸೌಕರ್ಯ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಭಾರತದ ಇತಿಹಾಸದ ಪುಟದಲ್ಲಿ ದಾಖಲಾಗಿರುವ ಎಲ್ಲ ಮಹನೀಯರ ಯಶಸ್ಸು,ಸಾಧನೆ ಈ ಸರ್ಕಾರಿ ಶಾಲೆಗಳಲ್ಲಿಯೇ ಆಗಿರುವುದು ಎಂಬುದು ಮೊದಲು ನಮಗೆ ತಿಳಿದಿರಬೇಕು. ಸರ್ಕಾರಿ ಶಾಲೆಗಳನ್ನು ಉಳ್ಳವರು ದತ್ತು ಪಡೆದು ತಮ್ಮ ಮಕ್ಕಳಂತೆ ಆ ಶಾಲೆಯ ಮಕ್ಕಳ ವಿದ್ಯಾಭ್ಯಾಸಕ್ಕೆ ಸೌಕರ್ಯವನ್ನು ಒದಗಿಸಿದ್ದೆ ಆದಲ್ಲಿ ಭಾರತ ಶಿಕ್ಷಣ ಕ್ಷೇತ್ರದಲ್ಲಿ ಮಹತ್ತರ ಸಾಧನೆ ಮಾಡಬಲ್ಲದು,

ದೇಶದ ಸಮಗ್ರ ಅಭಿವೃದ್ಧಿಗೆ ಶಿಕ್ಷಣವೇ ಬುನಾದಿ, ದೇಶದಲ್ಲಿ ಹುಟ್ಟಿದ ಯಾವುದೇ ಮಗುವೂ ಮೂಲಭೂತ ಮೌಲ್ಯಯುತ ಶಿಕ್ಷಣದಿಂದ ವಂಚಿತವಾಗಬಾರದು,ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗಿಂತ ಹೆಚ್ಚಿನ ಮೌಲ್ಯಯುತ ಶಿಕ್ಷಣವನ್ನು ನುರಿತ ಶಿಕ್ಷಕರ ತಂಡ ನೀಡುತ್ತಿದೆ.

ಓದು ಬರಹ ಬಾರದ ಬಡ ಮೀನುಗಾರನ ಕುಟುಂಬದಲ್ಲಿ ಜನಿಸಿದ ಒಬ್ಬ ಸಾಮಾನ್ಯ ಬಾಲಕ ಅಬ್ದುಲ್ ಕಲಾಂ, ತನ್ನ ಸಾಧನೆಯ ಶಿಖರವನ್ನು ಬೆನ್ನೇರಿ ತನ್ನ ಸ್ವಂತ ಬುದ್ಧಿವಂತಿಕೆಯಿಂದ ಪ್ರಪಂಚದಲ್ಲಿಯೇ ಅತಿ ವೇಗದಲ್ಲಿ ಮುನ್ನುಗ್ಗುವ ಅಣು ಬಾಂಬ್ ಕ್ಷಿಪಣಿಯನ್ನು ಕಂಡುಹಿಡಿದು ದೇಶದ ರಕ್ಷಣಾ ವ್ಯವಸ್ಥೆಯನ್ನು ಪ್ರಪಂಚಕ್ಕೆ ಪರಿಚಯಿಸಿದ ಮಹಾನ್ ವಿಜ್ಞಾನಿ ಮುಂದೆ ಭಾರತದ ರಾಷ್ಟ್ರಪತಿಯಾಗಿ, ದೇಶದ ಅಮೂಲಾಗ್ರ ಬದಲಾವಣೆ ಮಾಡಿದ ಕಲಾಂ ರವರು ಸರ್ಕಾರಿ ಶಾಲೆಯಲ್ಲಿ ತನ್ನ ಶಿಕ್ಷಣವನ್ನು ಕಲಿತವರು.

ಮುಂದಿನ ದಿನಗಳಲ್ಲಿ ಈ ಶಾಲೆಯ ಸಮಗ್ರ ಅಭಿವೃದ್ಧಿಗಾಗಿ ನಮ್ಮ ಸಂಸ್ಥೆಯಿಂದ ಎಲ್ಲಾ ರೀತಿಯ ನೆರವು ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಬಿಇಓ,ಸೈಯದ್ ಮೊಸಿನ್,ಪುರಸಭಾ ಸದಸ್ಯೆ ಡಾಕ್ಟರ್ ಸ್ವಾತಿ ಪ್ರದೀಪ್, ಅಕ್ಷರ ದಾಸೋಹ ಸಮನ್ವಯಾಧಿಕಾರಿ ಪರಮೇಶ್ವರಪ್ಪ, ಬಿಜೆಪಿ ಮುಖಂಡ ತುಂಬಿನಕೆರೆ ಬಸವರಾಜ್, ಗ್ರಾಮ ಪಂಚಾಯಿತಿ ಸದಸ್ಯ ರಾಜಾಹುಲಿ ಸೇರಿದಂತೆ ಗ್ರಾಮದ ಮುಖಂಡರುಗಳು ಶಾಲಾ ಶಿಕ್ಷಕರು ಹಾಗೂ ಮಹಿಳಾ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

ಜೋಡಿ ತುಬಿನಕೆರೆ ಶಾಲೆಯ ಮಕ್ಕಳು ನೆಲದ ಮೇಲೆ ಕುಳಿತು ಶಿಕ್ಷಣ ಕಲಿಯುತ್ತಿದ್ದರು, ಇದನ್ನು ಮನಗಂಡು ಸದ್ಗುರು ಸಂಸ್ಥೆ ಮಾಲೀಕರು ಹಾಗೂ ಹೊಸದುರ್ಗ ಪುರಸಭಾ ಸದಸ್ಯರಾದ ಡಾಕ್ಟರ್ ಸ್ವಾತಿ ಪ್ರದೀಪ್ ರವರ ಹುಟ್ಟುಹಬ್ಬದ ನೆನಪಿಗಾಗಿ, ಯಾವುದೇ ಖಾಸಗಿ ಶಾಲೆಗಿಂತಲೂ ಭಿನ್ನವಾಗಿ ಈ ಶಾಲೆಯಲ್ಲಿ ಮಕ್ಕಳು ಇರಬೇಕೆಂದು ಕುಳಿತುಕೊಳ್ಳಲು ಬೆಂಚು, ಬ್ಯಾಗ್,ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಮಕ್ಕಳಿಗೆ ಸಮವಸ್ತ್ರ, ಹೀಗೆ ಹಲವಾರು ಪರಿಕರಗಳನ್ನು ಸದ್ಗುರು ಆಯುರ್ವೇದ ಸಂಸ್ಥೆ ಇಲ್ಲಿನ ಮಕ್ಕಳಿಗಾಗಿ ನೀಡಿರುವುದು ಅತ್ಯಂತ ಶ್ಲಾಘನೀಯ

### ಹಿಂದುಳಿದ ವರ್ಗದವರು ವಾಸಿಸುವ ಗ್ರಾಮಗಳಲ್ಲಿ ಆರೋಗ್ಯ ಸೇವೆ ಸಿಗಲಿ

» **ಹೊಸದುರ್ಗ**

ಎಲ್ಲಾ ಭಾಗ್ಯಗಳಿಗಿಂತ ಆರೋಗ್ಯ ಭಾಗ್ಯ ಶ್ರೇಷ್ಠವಾಗಿದೆ ಹಿಂದುಳಿದ ವರ್ಗದವರು ವಾಸಿಸುವ ಗ್ರಾಮಗಳಲ್ಲಿ ಆರೋಗ್ಯ ಸೇವೆ ಸಿಗಲಿ ಎಂಬ ಕಾರಣದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು. ತಾಲೂಕಿನ ಆಲದಹಳ್ಳಿ ಎಕೆ ಕಾಲೋನಿಯಲ್ಲಿ ಬುಧವಾರ ಆಯುಷ್ ಇಲಾಖೆಯ ಆಯುಷ್ ಸೇವಾ ಗ್ರಾಮ ಎಂಬ ವಿನೂತನ ಕರ್ಯಕ್ರಮವನ್ನ ಉದ್ಘಾಟಿಸಿ ಮಾತನಾಡಿದರು. ನಿಯಮಿತವಾಗಿ ವೈದ್ಯರು ನಿಮ್ಮ ಊರಿಗೆ ಬಂದು ಆರೋಗ್ಯ ತಪಾಸಣೆ ಮಾಡಲಿದ್ದಾರೆ. ಎಲ್ಲರೂ ಇದರ ಪ್ರಯೋಜನ ಪಡೆದುಕೊಳ್ಳಿ ಎಂದು ಕರೆ ನೀಡಿದರು. ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾಕ್ಟರ್ ಚಂದ್ರಕಾಂತ್ ನಾಗಸಮುದ್ರ ಪ್ರಾಸ್ತವಿಕವಾಗಿ ಮಾತನಾಡಿದರು.

ವೇದಿಕೆ ಮೇಲೆ ಕಂಗುವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಹೇಶ್ವರಪ್ಪ ಸದಸ್ಯರುಗಳಾದ ಶ್ರೀಮತಿ ತ್ರಿವೇಣಿ ಹರೀಶ್, ಬಸಪ್ಪ ಟಿ, ರಾಮಪ್ಪ ಉಷಾ ಹಾಗೂ ವೈದ್ಯಾಧಿಕಾರಿಗಳಾದ ಡಾ. ನದಾಫ್ ಡಾ. ಮಹೇಶ್ ಉಪಸ್ಥಿತರಿದ್ದರು

## ಪ್ರಮುಖ ಸುದ್ದಿ

### ತರಬೇತಿ ಕಾರ್ಯಾಗಾರದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಗ್ರಾಮೀಣ ಮಕ್ಕಳ ಇಂಗ್ಲೀಷ್ ಭಾಷಾ ಸುಧಾರಣೆಗೆ ಪ್ರಯತ್ನಿಸಿ

» **ಚಿತ್ರದುರ್ಗ**

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಇಂಗ್ಲೀಷ್ ಭಾಷಾ ಕಲಿಕೆ ಕಠಿಣವಾಗಿರಬಹುದು, ಹೀಗಾಗಿ ಗ್ರಾಮೀಣ ಭಾಗದ ಮಕ್ಕಳ ಇಂಗ್ಲೀಷ್ ಭಾಷಾ ಸುಧಾರಣೆಗೆ ಶಿಕ್ಷಕರು ಪ್ರಯತ್ನಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್,ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲೆಯ ಆಂಗ್ಲ ಭಾಷಾ ಶಿಕ್ಷಕರ ಕ್ಲಬ್ ಸಂಯುಕ್ತಾಶ್ರಾಯದಲ್ಲಿ ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ ಆಂಗ್ಲ ಭಾಷಾ ಶಿಕ್ಷಕರ ಶೈಕ್ಷಣಿಕ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬೋರ್ಡ್‌ಪರೀಕ್ಷೆಗಳಲ್ಲಿಇಂಗ್ಲೀಷ್‌ಭಾಷೆ ಪರೀಕ್ಷೆಯಲ್ಲಿ ಮಕ್ಕಳು ಉತ್ತಮ ಸಾಧನೆ ತೋರುವಂತೆ ಮಾಡುವ ಜವಾಬ್ದಾರಿ ಶಿಕ್ಷಕರ ಮೇಲೆ ಇದೆ. ಮಕ್ಕಳಿಗೆ ಇಂಗ್ಲೀಷ್ ಕಲಿಕೆಯ ಅಗತ್ಯತೆ ಇದೆ. ಕನ್ನಡ ಭಾಷೆಯ ಜೊತೆಗೆ ಇಂಗ್ಲೀಷ್ ಕೂಡ ಸಂಪರ್ಕ ಭಾಷೆಯ ಪ್ರಮುಖ ಕೊಂಡಿಯಾಗಿದೆ. ಗ್ರಾಮೀಣ ಭಾಗದ ಮಕ್ಕಳಿಗೆ ಇಂಗ್ಲೀಷ್ ಭಾಷೆಯಲ್ಲಿ ಅಷ್ಟೊಂದು ಹಿಡಿತ ಇರುವುದಿಲ್ಲ. ಇವರ ಬಗ್ಗೆ ಹೆಚ್ಚಿನ ನಿಗಾ ವಹಿಸಿ ಪರೀಕ್ಷೆಗೆ ಸನ್ನದ್ಧಗೊಳಿಸಬೇಕು. ಮಕ್ಕಳು ಯಾವ ವಿಷಯ ಕಲಿಕೆಯಲ್ಲಿ ದುರ್ಬಲರಾಗಿದ್ದಾರೋ ಅಂತಹ ವಿಷಯದಲ್ಲಿ ಅವರಿಗೆ ಹೆಚ್ಚಿನ ಬೋಧನೆ ಮಾಡಿ ಶಿಕ್ಷಕರು ಮುಂದೆ ತರಬೇಕು. ಯಾವ ಶಾಲೆಗಳಲ್ಲಿ ಫಲಿತಾಂಶ ಕಡಿಮೆ ಇರುತ್ತಾದೆಯೋ ಅಂತಹ ಶಾಲೆಗಳಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಲಹೆ ನೀಡಿದರು. ಶಾಲಾ ಶಿಕ್ಷಣ ಇಲಾಖೆ



ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ ಮಾತನಾಡಿ, ನಾವು ಮಾಡುವಂತಹ ಕ್ಷೇತ್ರದಲ್ಲಿ ಪ್ರಮಾಣಿಕತೆ, ಭಾವನಾತ್ಮಕತೆ ಬೆಳೆಸಿಕೊಳ್ಳಬೇಕು. ಶಿಕ್ಷಣ ಕ್ಷೇತ್ರದಲ್ಲಿ ಜ್ಞಾನ ಪ್ರಮುಖವಾಗಿರುತ್ತದೆ. ಉನ್ನತ ವ್ಯಕ್ತಿಗಳನ್ನು ತಯಾರಿಸುವರು ಶಿಕ್ಷಕರು ಮಾತ್ರ. ಶಿಕ್ಷಕರು ಮಕ್ಕಳಿಗೆ ದೊಡ್ಡ ಗುರಿ ಇಟ್ಟುಕೊಳ್ಳುವಂತೆ ಸಲಹೆ ನೀಡಬೇಕು. ಆತ್ಮವಿಶ್ವಾಸ, ದೃಢಮನಸ್ಸು ಇದ್ದರೆ ಮಾತ್ರ ಯಶಸ್ಸು ಸಾಧ್ಯ. ಗುಣಾತ್ಮಾಕ ಶಿಕ್ಷಣ ನೀಡುವಂತಹದು ನಮ್ಮ ಜವಾಬ್ದಾರಿಯಾಗಿರುತ್ತದೆ. ಇಂದಿನ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಕ್ಕಳಿಗೆ ಬದುಕು ಕಟ್ಟಿಕೊಳ್ಳುವ ಕೌಶಲ್ಯ ಬೆಳಸಬೇಕು ಎಂದು ಹೇಳಿದರು.ಕ್ಷೇತ್ರಶಿಕ್ಷಣಾಧಿಕಾರಿ ನಾಗಭೂಷಣ್ ಮಾತನಾಡಿ, ಕನ್ನಡ ಭಾಷೆಯ ಜೊತೆಗೆ ಇಂಗ್ಲೀಷ್ ಭಾಷೆಗೆ ಪ್ರಾಮುಖ್ಯತೆ ನೀಡಬೇಕು. ಇಂಗ್ಲೀಷ್ ಭಾಷೆಯನ್ನು ಸರಳ ಭಾಷೆಯಾಗಿ ಮಕ್ಕಳಿಗೆ ಹೇಳಬೇಕು. ಆಗ ಮಾತ್ರ ಮಕ್ಕಳು ಇಂಗ್ಲೀಷ್ ಕಲಿಕೆಯಲ್ಲಿ ಆಸಕ್ತಿ ತೋರುತ್ತಾರೆ ಎಂದರು.ಬೆಂಗಳೂರು ಜ್ಞಾನ ಭಾರತಿ ಕ್ಯಾಂಪಸ್, ರೀಜಿನಲ್ ಇನ್‌ಸ್ಟಿಟ್ಯೂಟ್ ಆಫ್ ಇಂಗ್ಲೀಷ್ ಸೌತ್ ಇಂಡಿಯಾದ ಹಿರಿಯ ಪ್ರಾಧ್ಯಾಪಕ, ರಾಜ್ಯ ಸಂಪನ್ಮೂಲ ವ್ಯಕ್ತಿಯಾದ ಡಾ. ರವಿನಾರಾಯಣ್ ಚಕ್ರಕೋಡಿ ಅವರು ಆಂಗ್ಲ ಭಾಷೆ ಶಿಕ್ಷಕರುಗಳಿಗೆ ತರಬೇತಿ ನೀಡಿದರು.ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ ನೋಡಲ್ ಅಧಿಕಾರಿ ಎನ್.ಆರ್. ತಿಪ್ಪೇಸ್ವಾಮಿ, ಮೊಳಕಾಲ್ಮೂರು ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿ ನಿರ್ಮಲಾ ದೇವಿ, ಆಂಗ್ಲ ಮತ್ತು ಸಮಾಜ ವಿಷಯದ ವಿಷಯ ಪರಿವೀಕ್ಷಕ ಚಂದ್ರಣ್ಣ, ಗಣಿತ ವಿಷಯದ ವಿಷಯ ಪರಿವೀಕ್ಷಕಿ ಸವಿತಾ, ಕನ್ನಡ ಮತ್ತು ಹಿಂದಿ ವಿಷಯದ ವಿಷಯ ಪರಿವೀಕ್ಷಕ ಶಿವಣ್ಣ, ಗುರುಮೂರ್ತಿ ಸೇರಿದಂತೆ ಜಿಲ್ಲೆಯ ಆಂಗ್ಲ ಭಾಷೆ ಶಿಕ್ಷಕರುಗಳು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T